ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 64 RNI Number : KNKAN/25/A2770 11-03-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :64 ರಾಯಚೂರು 11-03-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಅನಿಲ ಪೂರೈಕೆ ನಿಲ್ಲದಂತೆ ಕೇಂದ್ರ ಸರ್ಕಾರ ಕ್ರಮ

ನವದೆಹಲಿ,ಮಾ.10-

ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಜಗತ್ತಿನಾದ್ಯಂತ ತೈಲ ಮತ್ತು ಅನಿಲ ಬಿಕ್ಕಟ್ಟು ತಲೆದೋರುತ್ತಿದೆ. ಭಾರತಕ್ಕೂ ಇದರ ಬಿಸಿ ತಾಕಿದೆ. ಈಗಾಗಲೇ ಹಲವೆಡೆ ಅನಿಲ ವ್ಯತ್ಯಯ ಉಂಟಾಗುತ್ತಿದೆ. ಇದನ್ನು ಸರಿದೂಗಿಸಲು ಕೇಂದ್ರ ಸರ್ಕಾರ ಪ್ರಮುಖ ಅಗತ್ಯ ಸರಕುಗಳ ಕಾಯ್ದೆಯನ್ನು ಸಕ್ರಿಯಗೊಳಿಸಿ, ಎಲ್‌ಪಿಜಿ ಮತ್ತು ನ್ಯಾಚುರಲ್ ಗ್ಯಾಸ್ ಬಳಸುವವರ ಪೈಕಿ ಆದ್ಯತೆ ಮೇರೆಗೆ ಹಂಚಿಕೆ ಮಾಡಲು ಕ್ರಮ ತೆಗೆದುಕೊಂಡಿದೆ.

ಇಲ್ಲಿಯವರೆಗೆ, ಸಂಕುಚಿತ ನೈಸರ್ಗಿಕ ಅನಿಲ () ಮತ್ತು ಕೊಳವೆ ಪೈಪ್ ಮೂಲಕ ಸರಬರಾಜಾಗುವ ಅಡುಗೆ ಅನಿಲವು ಆದ್ಯತೆಯ ವಲಯಗಳಾಗಿದ್ದವು. ಸೋಮವಾರ ತಡರಾತ್ರಿ ಹೊರಡಿಸಲಾದ ಗೆಜೆಟ್ ಅಧಿಸೂಚನೆಯಲ್ಲಿ ಎಲ್‌ಪಿಜಿಯನ್ನು ಆದ್ಯತೆಯ ಪಟ್ಟಿಗೆ ಸೇರಿಸಲಾಗಿದೆ.

ಎಲ್‌ಪಿಜಿ ನೈಸರ್ಗಿಕ ಅನಿಲದ ಸಂಸ್ಕರಣೆಯಿಂದ ಉತ್ಪತ್ತಿಯಾಗುತ್ತದೆ. ಇದು ಕಚ್ಚಾ ತೈಲ ಸಂಸ್ಕರಣೆಯ ಉಪಉತ್ಪನ್ನ. ಪ್ರೋಪೇನ್ ಮತ್ತು ಬ್ಯುಟೇನ್ ಅನಿಲಗಳನ್ನು ಬೇರ್ಪಡಿಸುವ ಮತ್ತು ಶುದ್ಧೀಕರಿಸುವ ಮೂಲಕ ಇದನ್ನು ತಯಾರಿಸಲಾಗುತ್ತದೆ. ನಂತರ ಅವುಗಳನ್ನು ಒತ್ತಡದ ದ್ರವ ಸ್ಥಿತಿಗೆ ಮಾರ್ಪಡಿಸಲಾಗುತ್ತದೆ. ಮನೆಗಳು ಮತ್ತು ರೆಸ್ಟೋರೆಂಟ್‌ಗಳಿಗೆ ಸಿಲಿಂಡರ್‌ಗಳ ಮೂಲಕ ಅದನ್ನು ಸಾಗಿಸಲಾಗುತ್ತದೆ.

ಗೃಹಬಳಕೆ ಮತ್ತು ವಾಹನಗಳಿಗೆ ಬೇಕಾದ ಎಲ್‌ಪಿಜಿ, ಪಿಎನ್‌ಜಿ ಮತ್ತು ಸಿಎನ್‌ಜಿ ಗ್ಯಾಸ್‌ಗಳ ಪೂರೈಕೆಯನ್ನು ಖಚಿಪಡಿಸುವುದಕ್ಕೆ ಮೊದಲ ಆದ್ಯತೆ ಇರಲಿದೆ. ಉದ್ಯಮಗಳು, ರಸಗೊಬ್ಬರ ಕಾರ್ಖಾನೆಗಳಿಗೆ ಬೇಕಾದ ನೈಸರ್ಗಿಕ ಅನಿಲದ ಸರಬರಾಜನ್ನು ನಂತರದ ಆದ್ಯತಾ ವಲಯ ಎಂದು ವರ್ಗೀಕರಿಸಲಾಗಿದೆ.

ಯಾವ ವಲಯಗಳಿಗೆ ಆದ್ಯತೆ: ಗೃಹಬಳಕೆಯ ಕೊಳವೆ ಗ್ಯಾಸ್ ಸರಬರಾಜು ನೂರಕ್ಕೆ ನೂರರಷ್ಟು ಪೂರೈಕೆ

ವಾಹನಗಳಿಗೆ ಸಿಎನ್‌ಜಿ ಗ್ಯಾಸ್ ಪ್ರತಿಶತ ನೂರರಷ್ಟು ಪೂರೈಕೆ

ಚಹಾ ಉದ್ಯಮ, ಉತ್ಪದನೆ, ಕೈಗಾರಿಕಾ ಗ್ರಾಹಕರಿಗೆ ಅವರು ಹಿಂದಿನ ಆರು ತಿಂಗಳಲ್ಲಿ ಬಳಸಿದ ಸರಾಸರಿ ಆಧಾರದ ಮೇಲೆ ಶೇಕಡಾ 80 ರಷ್ಟನ್ನು ಈಗ ಪೂರೈಸಲಾಗುವುದು.

ಕೈಗಾರಿಕಾ ಮತ್ತು ವಾಣಿಜ್ಯ ಗ್ರಾಹಕರನ್ನು 4ನೇ ಆದ್ಯತಾ ವಲಯ ಎಂದು ಪಟ್ಟಿ ಮಾಡಲಾಗಿದ್ದು, ಇವರು ಕಳೆದ 6 ತಿಂಗಳಲ್ಲಿ ಬಳಕೆಯಾದ ಸರಾಸರಿ ಅನಿಲ ಬಳಕೆಯಲ್ಲಿ ಶೇಕಡಾ 80 ರಷ್ಟು ಪೂರೈಕೆ ಮಾಡಲಾಗುತ್ತದೆ.

ರಸಗೊಬ್ಬರ ಘಟಕಗಳಿಗೆ ಆರು ತಿಂಗಳ ಸರಾಸರಿ ಬಳಕೆಯನುಸಾರ ಸರಬರಾಜಿನಲ್ಲಿ ಶೇಕಡಾ 70 ರಷ್ಟನ್ನು ಪೂರೈಕೆ ಮಾಡಲಾಗುವುದು.

ಹಾರ್ಮುಜ್ ಜಲಮಾರ್ಗ ಬಂದ್ ಆಗಿ ಸಮಸ್ಯೆ: ಭಾರತಕ್ಕೆ ಬೇಕಾದ ಶೇಕಡಾ 30 ರಷ್ಟು ನೈಸರ್ಗಿಕ ಗ್ಯಾಸ್ ಅನ್ನು ಹಾರ್ಮುಜ್ ಜಲಮಾರ್ಗದಿಂದ ಪೂರೈಕೆಯಾಗುತ್ತಿತ್ತು. ಇರಾನ್, ಅಮೆರಿಕ ಮತ್ತು ಇಸ್ರೇಲ್ ಸಂಘರ್ಷದಿಂದಾಗಿ ಆ ಮಾರ್ಗ ಬಂದ್ ಆಗಿದೆ. ಈ ಹಿನ್ನೆಲೆಯಲ್ಲಿ ಅನಿಲ ಪೂರೈಕೆ ನಿಂತಿದೆ. ಆದರೂ, ಭಾರತ ಸರ್ಕಾರ ಹಾರ್ಮುಜ್ ಹೊರತಾಗಿ ಇತರ ಮಾರ್ಗಗಳ



ಮೂಲಕ ನೈಸರ್ಗಿಕ ಅನಿಲವನ್ನು ಖರೀದಿಸಿ ತರಲು ಪ್ರಯತ್ನಿಸುತ್ತಿದೆ. ತಕ್ಷಣದ ಸಮಸ್ಯೆಯನ್ನು ತಡೆಯಲು ಅನಿಲ ಬಳಕೆಯ ಆದ್ಯತಾ ವಲಯಗಳನ್ನು ನಿಗದಿ ಮಾಡಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

ಇಂದು ಬಂದ್‌ಗೆ ಮಾದಿಗ ದಂಡೋರಎಂಆರ್‌ಪಿಎಸ್ ಬೆಂಬಲ



ರಾಯಚೂರು, ಮಾ.10-

ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಮಾರ್ಚ್ 11ರಂದು ನಡೆಯಲಿರುವ ರಾಯಚೂರು ಬಂದ್‌ಗೆ ಮಾದಿಗ ದಂಡೋರ ಹಾಗೂ ಎಂಆರ್‌ಪಿಎಸ್ ಸಂಘಟನೆ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಮಾನಪ್ಪ ಮೇಸ್ತ್ರಿ ಘೋಷಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಪಾಲರ ಅಂಗೀಕಾರ ದೊರೆತಿರುವ ಒಳಮೀಸಲಾತಿ ಕಾಯ್ದೆಯನ್ನು ಅನ್ವಯಿಸದೆ 56,432 ಹುದ್ದೆಗಳನ್ನು ಭರ್ತಿ ಮಾಡಲು ಸಚಿವ ಸಂಪುಟ ತೀರ್ಮಾನಿಸಿರುವುದು ಸಂವಿಧಾನ ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ ಎಂದು ತೀವ್ರವಾಗಿ ಖಂಡಿಸಿದರು.

ಮಾದಿಗ ದಂಡೋರ ಹಾಗೂ ಎಂಆರ್‌ಪಿಎಸ್ ರಾಜ್ಯಾಧ್ಯಕ್ಷ ಬಿ. ನರಸಪ್ಪ ದಂಡೋರ ಅವರ ಆದೇಶದ ಮೇರೆಗೆ ಈ ಹೋರಾಟವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಕಳೆದ 35 ವರ್ಷಗಳಿಂದ ನಡೆಯುತ್ತಿರುವ ಒಳಮೀಸಲಾತಿ ಹೋರಾಟಕ್ಕೆ ಸರ್ಕಾರದ ಈ ನಿರ್ಧಾರ ಮಹದ್ರೋಹವಾಗಿದೆ ಎಂದು ಆರೋಪಿಸಿದರು.

ಇದರ ವಿರುದ್ಧವಾಗಿ ಮಾರ್ಚ್ 11ರಂದು ರಾಯಚೂರಿನಲ್ಲಿ ಬಂದ್ ಆಚರಿಸಿ ಸರ್ಕಾರದ ವಿರುದ್ಧ ಅಣಕು ಶವಯಾತ್ರೆ ನಡೆಸಲಾಗುವುದು ಎಂದು ತಿಳಿಸಿದರು. ಹಾಗೆಯೇ ಮಾರ್ಚ್ 12ರಂದು ''ಬೆಂಗಳೂರು ಚಲೋ'' ಹೋರಾಟ ನಡೆಯಲಿದ್ದು, ಅದರಲ್ಲಿ ಪದ್ಮಶ್ರೀ ಮಂದಕೃಷ್ಣ ಮಾದಿಗ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಮಾದಿಗ ಹಾಗೂ ಸಂಬಂಧಿತ ಉಪಜಾತಿಗಳ ಸಮುದಾಯದವರು, ವಿದ್ಯಾರ್ಥಿಗಳು, ಮಹಿಳೆಯರು, ಹೋರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು

ಮೂರನೇಯ ಪುಟಕ್ಕೆ

ಭಯ ಹುಟ್ಟಿಸುತ್ತಿರುವ ಚಿರತೆ ದಾಳಿ-ಜಾನುವಾರು ಸಾವು

ಅರಕೇರಾ,ಮಾ.10-

ಕೆ. ಹನುಮಂತ್ರಾಯನಗರದ ಸಮೀದ ರಜಾಕಸಾಬ ಎಂಬುವರ ಜಮ್ಮೀನಿನಲ್ಲಿ ಹುಸೇನಬಾಷ ಎಂಬುವರು ಜಮ್ಮೀನಿನಲ್ಲಿ ಕಟ್ಟಿಹಾಕಿದ ಹಸುವನ್ನು ರಾತ್ರಿ ಸಮಯದಲ್ಲಿ ಚಿರತೆ ದಾಳಿಮಾಡಿ ಹೊರಿಗರವನ್ನು ತಿಂದುಹಾಕಿದ ಘಟನೆ ಜರುಗಿದೆ.ಮುಂಜಾನೆ ಎದ್ದು ರೈತ ಹುಸೇನಬಾಷ ನೋಡಿದಾಗ ಹಸುವನ್ನು ಚಿರತೆ ತಿಂದುದ್ದನ್ನು ನೋಡಿ ಗಾಬರಿಯಾಗಿದ್ದಾನೆ. ಸುದ್ದಿ ತಿಳಿಯುತ್ತಿದಂತೆ ಸುತ್ತಮುತ್ತಲಿನ ಜಮ್ಮೀನಿನಲ್ಲಿರುವ ರೈತರು ಬಂದು ನೋಡಿದ ರೈತರಿಗೆ ಈಗ ಆಂತಕ ಸೃಷ್ಟಿಯಾಗಿದೆ.ಕಳೆದ3-4 ತಿಂಗಳು ಹಿಂದೆಯಷ್ಟೇ ಬಿ. ಗಣೇಕಲ್. ಇರಲಕುಂಟಾ ಸೇರಿದಂತೆ ಮನೆಯಮುಂದೆ ಕಟ್ಟಿಹಾಕಿದ ಹಸುವನ್ನು ತೆಗೆದುಕೊಂಡು ಹೋಗಿ





ತಿಂದುಹಾಕಿದ ಘಟನೆ ಎದುರಿಗೆ ಇರುವಾಲೇ ಈಗ ಮತ್ತೆ ಚಿರತೆ ಹಸು ತಿಂದಿರುವದು ಭಯ ಹುಟ್ಟಿಸಿದೆ.ಸದರಿ ಈಭಾಗದಲ್ಲಿ ಸಮೀಪದಲ್ಲಿ ಗುಡ್ಡ ಇದ್ದು ರಾತ್ರಿ ಗುಡ್ಡದ ಪ್ರದೇಶದಲ್ಲಿ ವಾಸ ಮಾಡಿ ರಾತ್ರಿ ವೇಳೆ ಆಹಾರಕ್ಕಾಗಿ ಚಿರತೆ ಹೊರಗಡೆ ಬರುತ್ತಿದ್ದು.ರಾತ್ರಿ ವೇಳೆ ಹೊಲ, ಗದ್ದೆಗಳಿಗೆ ನೀರು ಹಾಯಿಸುವುದಕ್ಕೆ ಹೋಗಲು ಹೆದರುತ್ತಿದ್ದಾರೆ. ಉದಾಹರಣೆಗಳಿವೆ.ಹಸು, ಮೇಕೆ, ನಾಯಿಗಳೇ ಚಿರತೆಗಳ ಟಾರ್ಗೆಟ್. ರೈತರು ಹೈನುಗಾರಿಕೆಯನ್ನೇ ನಂಬಿ ಬದುಕು ಕಟ್ಟಿಕೊಂಡಿದ್ದಾರೆ. ರೈತರಿಗೆ ಆಧಾರ ಸ್ತಂಭವಾಗಿರುವ ಸಾಕು ಪ್ರಾಣಿಗಳನ್ನು ಚಿರತೆಗಳು ಬಲಿ ಪಡೆಯುತ್ತಿರುವುದರಿಂದ ಅನ್ನದಾತರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ.

ಮೂರನೇಯ ಪುಟಕ್ಕೆ

ಸ್ನೇಹಿತರ ಕೈಯಲ್ಲಿ ಅಪ್ರಾಪ್ತ ಬಾಲಕನ ಕೊಲೆಯೋ, ಸಹಜ ಸಾವೋ?..

ಲಿಂಗಸೂಗೂರು,ಮಾ.10-

ಹೊಸಾ ಬಟ್ಟೆ ಖರೀದಿಸಲು ಒಟ್ಟಿಗೆ ಹೋದ ಮೂವರು ಸ್ನೇಹಿತರಲ್ಲಿ ಓರ್ವ ಅಪ್ರಾಪ್ತ ಬಾಲಕ ಮೃತಪಟ್ಟದ್ದು. ಅಪ್ರಾಪ್ತ ಬಾಲಕನನ್ನು ಚೀಲದಲ್ಲಿ ತುಂಬಿ ಕಲ್ಲುಕಟ್ಟಿ ಕೆರೆಯಲ್ಲಿ ಬಿಸಾಡಿದ ಧಾರಣ ಘಟನೆ ಎಂದು ಲಿಂಗಸಗೂರಿನಲ್ಲಿ ಬೆಳಕಿಗೆ ಬಂದಿದೆ. ಆದರೆ ಇದು ಕೊಲೆಯೋ ಅಥವಾ ಸಹಜ ಸಾವೋ ಎಂಬ ಬಗ್ಗೆ ಸಾಕಷ್ಟು ಅನುಮಾನಗಳು ಹುಟ್ಟಿಕೊಂಡಿವೆ.



ರಾಯಚೂರು ಜಿಲ್ಲೆಯ ಲಿಂಗಸುಗೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸ್ನೇಹಿತರ ಕೈಯಲ್ಲಿ ಅಪ್ರಾಪ್ತ ಬಾಲಕನ ಕೊಲೆಯಾದ ದುರ್ಘಟನೆ ಬೆಳಕಿಗೆ ಬಂದಿದೆ. ಭಾನುವಾರ ಬೆಳಿಗ್ಗೆ ಗ್ರಾಮದಿಂದ ಮೂವರು ಸ್ನೇಹಿತರು ಬಟ್ಟೆ ಖರೀದಿಗಾಗಿ ಬೈಕ್‌ನಲ್ಲಿ ಲಿಂಗಸುಗೂರು ಪಟ್ಟಣಕ್ಕೆ ತೆರಳಿದ್ದರು. ಆದರೆ ಸಂಜೆ ವೇಳೆಗೆ ಗ್ರಾಮಕ್ಕೆ ಮರಳಿ ಬಂದಿದ್ದು ಇಬ್ಬರು ಮಾತ್ರ. ಮಗ ಮನೆಗೆ ಮರಳದೇ ಇರುವುದರಿಂದ ಆತಂಕಗೊಂಡ ಪೋಷಕರು ಹಾಗೂ ಗ್ರಾಮಸ್ಥರು ವಿಚಾರಣೆ ಆರಂಭಿಸಿದರು.

ಸ್ನೇಹಿತರೊಂದಿಗೆ ತೆರಳಿದ್ದ ಮಾಹಿತಿ ತಿಳಿದು ಇಬ್ಬರು ಬಾಲಕರನ್ನು ಗ್ರಾಮಸ್ಥರು ಪ್ರಶ್ನಿಸಿದಾಗ ಘಟನೆ ಬಯಲಿಗೆ ಬಂದಿದೆ. ಸ್ನೇಹಿತನಾದ ಕಾರ್ತಿಕ (15)ನನ್ನು ಗೋಣಿ ಚೀಲದಲ್ಲಿ ಕಲ್ಲು ಕಟ್ಟಿ ಕೆರೆಗೆ ಬಿಸಾಡಿದ್ದೇವೆ ಎಂದು ಅವರು ತಪ್ಪೊಪ್ಪಿಕೊಂಡಿದ್ದಾರೆ ಎನ್ನಲಾಗಿದೆ. ಕಾರ್ತಿಕ 9ನೇ ತರಗತಿಯಲ್ಲಿ ಓದುತ್ತಿದ್ದ ಅಪ್ರಾಪ್ತ ಬಾಲಕನಾಗಿದ್ದು, ಆರೋಪಿಗಳಾದ ಇಬ್ಬರೂ 10ನೇ ತರಗತಿ ವಿದ್ಯಾರ್ಥಿಗಳಾಗಿದ್ದಾರೆ.

ಈ ವಿಷಯ ತಿಳಿದ ತಕ್ಷಣ ಪೋಷಕರು ಆರೋಪಿಗಳನ್ನು ಲಿಂಗಸುಗೂರು ಠಾಣೆಗೆ ಕರೆದುಕೊಂಡು ಹೋಗಿ ಪೊಲೀಸರಿಗೆ ಒಪ್ಪಿಸಿದರು. ಸೋಮವಾರ ಮಧ್ಯಾಹ್ನ ಲಿಂಗಸುಗೂರಿನ ಕರಡಕಲ್ ಕೆರೆಯಿಂದ ಕಾರ್ತಿಕನ ಶವವನ್ನು ಪೊಲೀಸರು

ಮೂರನೇಯ ಪುಟಕ್ಕೆ

ಜಮೀನು ಒದಗಿಸಿದರೆ ಸಿಂಧನೂರಲ್ಲಿ ಜವಳಿ ಪಾರ್ಕ್

ರಾಯಚೂರು ಮಾ.10-

ಕೇಂದ್ರ ಸರ್ಕಾರದ ಅಧೀನದಲ್ಲಿ ಸುಮಾರು 7,500 ಎಕರೆ ಭೂಮಿ ಇದ್ದು, ಇದರಲ್ಲಿ 15 ಎಕರೆಯನ್ನು ಜವಳಿ ಇಲಾಖೆಗೆ ಮಂಜೂರು ಮಾಡಿದರೆ ಸಿಂಧನೂರಲ್ಲಿ ಜವಳಿ ಪಾರ್ಕ್ ಸ್ಥಾಪನೆ ಬೇಡಿಕೆಯನ್ನು ಪರಿಶೀಲಿಸಲಾಗುವುದು ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರು ತಿಳಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಮಂಗಳವಾರ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಬಸನಗೌಡ ಬಾದರ್ಲಿ ಅವರ ಪ್ರಶ್ನೆಗೆ ಉತ್ತರ ನೀಡಿರುವ ಸಚಿವರು, ಜವಳಿ ಪಾರ್ಕ್ ಸ್ಥಾಪನೆಗೆ 15 ಎಕರೆ ಭೂಮಿ ಗುರುತಿಸಿ ಇಲಾಖೆಗೆ ಹಸ್ತಾಂತರಿಸಲು ಕಂದಾಯ ಇಲಾಖೆಗೆ ಪತ್ರ ಬರೆಯಲಾಗಿದೆ. ಆದರೆ, ಒಂದೇ ಕಡೆ 15 ಎಕರೆ ಸರ್ಕಾರದ ಭೂಮಿ ಲಭ್ಯ ಇಲ್ಲ ಎಂದು ತಿಳಿಸಿದ್ದಾರೆ.

ಉದ್ಯೋಗ ಅರಸಿ ಸಿಂಧನೂರು ತಾಲೂಕಿನ ಯುವಕ ಯುವತಿಯರು ರಾಜ್ಯದ ವಿವಿಧ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಜವಳಿ ಪಾರ್ಕ್ ಸ್ಥಾಪನೆ ಮಾಡಿದರೆ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಯಾಗಲಿದೆ. ಆದರೆ, ಜವಳಿ ಪಾರ್ಕ್ ನಿರ್ಮಿಸಲು ಅಗತ್ಯ ಪ್ರಮಾಣದ ಸರ್ಕಾರದ ಭೂಮಿ ಸಿಂಧನೂರು ತಾಲೂಕಿನಲ್ಲಿ ಇಲ್ಲ. ಕೇಂದ್ರ ಸರ್ಕಾರದ ಭೂಮಿ ಲಭ್ಯವಿದ್ದು,

ಮೂರನೇಯ ಪುಟಕ್ಕೆ

ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆ: ಆರೋಗ್ಯ ಕಾಪಾಡಲು ಜಿಲ್ಲಾಧಿಕಾರಿ ನಿತೀಶ್ ಕೆ. ಸಾರ್ವಜನಿಕರಲ್ಲಿ ಮನವಿ

ರಾಯಚೂರು ಮಾರ್ಚ್ 10-

ಭಾರತೀಯ ಹವಾಮಾನ ಇಲಾಖೆಯ ವರದಿಯ ಪ್ರಕಾರ ಮುಂದಿನ ದಿನಗಳಲ್ಲಿ ರಾಯಚೂರು ಜಿಲ್ಲೆಯಲ್ಲಿ ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದ್ದು, ಬಿಸಿ ಗಾಳಿ (ಹೀಟ್ ವೇವ್) ಎಚ್ಚರಿಕೆ ನೀಡಲಾಗಿದೆ. ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮನವಿ ಮಾಡುತ್ತಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಏನು ಮಾಡಬೇಕು: ಸಾರ್ವಜನಿಕರು ರೇಡಿಯೋ, ಟಿವಿ, ದಿನ ಪತ್ರಿಕೆಗಳಲ್ಲಿ ಬಿಸಿಲಿನ ತಾಪಮಾನದ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿಕೆಯಿಲ್ಲದಿದ್ದರೂ ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸಬೇಕು. ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು. ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಗಳನ್ನು ಬಳಸಬೇಕು.

ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ ಪ್ರಯಾಣ ಮಾಡುವಾಗ ನಿಮ್ಮೊಂದಿಗೆ ನೀರನ್ನು ತೆಗೆದುಕೊಂಡು ಹೋಗುವುದು. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಬೇಕು.

ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ , ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ

ಮೂರನೇಯ ಪುಟಕ್ಕೆ

''ಸುಬ್ಬಣ್ಣ ಮಾಸ್ತಾರ'' ಹೆಸರಿನಲ್ಲಿ ವೆಂಗಳಾಪುರ ತಾಂಡವನ್ನು ಕಂದಾಯ ಗ್ರಾಮ ಮಾಡುವ ಕ್ರಮಕ್ಕೆ ವಿರೋಧ

ರಾಯಚೂರು, ಮಾ.10-

ದೇವದುರ್ಗ ತಾಲ್ಲೂಕಿನ ಕರಿಗುಡ್ಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೆಂಗಳಾಪುರ ತಾಂಡವನ್ನು ''ಸುಬ್ಬಣ್ಣ ಮಾಸ್ತಾರ'' ಎಂಬ ವೈಯಕ್ತಿಕ ಹೆಸರಿನಲ್ಲಿ ಕಂದಾಯ ಗ್ರಾಮವನ್ನಾಗಿ ಮಾಡುವ ಕ್ರಮಕ್ಕೆ ಸ್ಥಳೀಯರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಮಲ್ಲಯ್ಯ ಕಟ್ಟಿಮನಿ ಅವರ ನೇತೃತ್ವದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವೆಂಗಳಾಪುರ ತಾಂಡದ ನಿವಾಸಿಗಳು ಈ ಬಗ್ಗೆ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಲ್ಲಯ್ಯ ಕಟ್ಟಿಮನಿ ಅವರು,



ವೆಂಗಳಾಪುರ ತಾಂಡವನ್ನು ಹೊಸ ಕಂದಾಯ ಗ್ರಾಮವನ್ನಾಗಿ ಪರಿವರ್ತಿಸಲು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದ್ದು, ಈ ಪ್ರಕ್ರಿಯೆಯಲ್ಲಿ ಗ್ರಾಮ ಸಭೆ ನಡೆಸದೇ ಕೇವಲ ಕೆಲವರ ಅಭಿಪ್ರಾಯದ ಆಧಾರದ ಮೇಲೆ ಅವೈಜ್ಞಾನಿಕ ವರದಿ ಸಿದ್ಧಪಡಿಸಲಾಗಿದೆ ಎಂದು ಆರೋಪಿಸಿದರು.

ವೆಂಗಳಾಪುರ ತಾಂಡದಲ್ಲಿ ಸುಮಾರು 65 ಕುಟುಂಬಗಳು ನೆಲೆಸಿದ್ದು, ಒಟ್ಟು 315 ಜನಸಂಖ್ಯೆ ಇದೆ. ಆದರೆ, ತಾಂಡದ ಬಹುತೇಕ ನಿವಾಸಿಗಳ ಅಭಿಪ್ರಾಯವನ್ನು ಪಡೆಯದೇ ಅಧಿಕಾರಿಗಳು ತರಾತುರಿ ಯಲ್ಲಿ ವರದಿ ಸಲ್ಲಿಸಿರುವುದು ಸರಿಯಲ್ಲ ಎಂದು ಹೇಳಿದರು.

ಕಂದಾಯ ಗ್ರಾಮ ರಚನೆಗಾಗಿ ದೇವದುರ್ಗ ಹೋಬಳಿಯ ಬೆಂಗಳಾಪುರ ಸೀಮಾಂತರದ ಸರ್ವೆ ನಂ.11ರಲ್ಲಿ ಟೀಕಪ್ಪ ತಂದೆ ಹೂನ್ಯ,

ಮೂರನೇಯ ಪುಟಕ್ಕೆ

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆರೋಗ್ಯ ಇಲಾಖೆಯಿಂದ ರಂಗೋಲಿ ಸ್ಪರ್ಧೆ ಆಯೋಜನೆ

ಮಹಿಳೆಯರು ಸ್ವಾಭಿಮಾನಿಗಳಾಗುತ್ತಿರುವುದು ವಿಶೇಷ: ಡಾ.ನಂದಿತಾ ಎಮ್.ಎನ್.





ರಾಯಚೂರು ಮಾ.10-

ಈ ಹಿಂದೆ ಕೇವಲ ಮನೆಗಷ್ಟೇ ಸೀಮಿತವಾಗಿದ್ದ ಮಹಿಳೆಯು ಇದೀಗ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿಗೆ ಬಂದು ತನ್ನ ಸಾಮರ್ಥ್ಯ ಪ್ರದರ್ಶಿಸುತ್ತಿದ್ದಾಳೆ. ಇದು ಮಹಿಳಾ ಸ್ವಾಭಿಮಾನ ಮತ್ತು ಸಬಲೀಕರಣಕ್ಕೆ ಸಾಕ್ಷಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ನಂದಿತಾ ಎಮ್.ಎನ್. ಅವರು ಹೇಳಿದರು.

ಮಾರ್ಚ್ 09ರ ಸೋಮವಾರ ದಂದು

ಮೂರನೇಯ ಪುಟಕ್ಕೆ

ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಸೂಚನೆ

ಎಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ ಪಾರದರ್ಶಕವಾಗಿ ನಡೆಸಲು ಕ್ರಮವಹಿಸಿ ಡಾ. ಸುರೇಶ್ ಬಿ. ಇಟ್ನಾಳ್



ಕೊಪ್ಪಳ ಮಾ.10-

ಮಾರ್ಚ್ ಏಪ್ರಿಲ್-2026ರಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ವಾರ್ಷಿಕಯನ್ನು ಜಿಲ್ಲೆಯಲ್ಲಿ ಶಿಸ್ತಿನಿಂದ, ಪಾರದರ್ಶಕವಾಗಿ ಹಾಗೂ ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ನಡೆಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್. ಪಟೇಲ ಸಭಾಂಗಣದಲ್ಲಿ ಮಾರ್ಚ್/ಏಪ್ರಿಲ್-2026ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳ ಕುರಿತು ಶಾಲಾ ಶಿಕ್ಷಣ ಇಲಾಖೆಯಿಂದ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಇದೇ ಮಾರ್ಚ್ 18 ರಿಂದ ಏಪ್ರಿಲ್ 2 ರವರೆಗೆ ನಡೆಯಲಿರುವ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ಅಕ್ರಮ ಚಟುವಟಿಕೆಗೆ ಅವಕಾಶ ಕೊಡದೇ ಪರೀಕ್ಷಾ ನಿಯಮುಗಳಂತೆ ಮತ್ತು ಪರೀಕ್ಷಾ ಮಾರ್ಗಸೂಚಿಗಳನ್ವಯ ನಡೆಸಬೇಕು. ಕೊಪ್ಪಳ ಜಿಲ್ಲೆಯಲ್ಲಿ 2026ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಪರೀಕ್ಷೆ ಮುಖ್ಯ ಅಧೀಕ್ಷಕರು ಮಾರ್ಗಸೂಚಿಗಳನ್ನು ಓದಿಕೊಂಡು ಅದರಂತೆ ಕಾರ್ಯನಿರ್ವಹಿಸಬೇಕು. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ, ಅಗತ್ಯ ಕುಡಿಯುವ ನೀರು ಮತ್ತು ಶೌಚಾಲಯಗಳ ವ್ಯವಸ್ಥೆಯನ್ನು ಸಹ ಕಲ್ಪಿಸಬೇಕು. ಪರೀಕ್ಷೆ ಬರೆಯುವ ವಿಕಲಚೇತನ ವಿದ್ಯಾರ್ಥಿಗಳಿಗೆ ನೆಲ ಮಹಡಿಯಲ್ಲಿ ಸೂಕ್ತ ಆಸನದ ವ್ಯವಸ್ಥೆ ಮಾಡಬೇಕು. ಅಂಧ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಕೊಠಡಿಯ ವ್ಯವಸ್ಥೆ ಮತ್ತು ಬರವಣಿಗೆ ಸಹಾಯಕರ ಒಪ್ಪಿಗೆ ಪತ್ರವನ್ನು ಪರಿಶೀಲಿಸಿ ಅಗತ್ಯ ಕ್ರಮ ವಹಿಸಬೇಕು ಎಂದರು.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಬರೆಯಲು ಮೂರು ಬಾರಿ ಅವಕಾಶವಿದ್ದು, ಮೊದಲ ಪರೀಕ್ಷೆಯಲ್ಲಿ ಮಕ್ಕಳು ಭಯ ಪಡುವ ಅವಶ್ಯಕತೆಯಿಲ್ಲ. ಇದರ ಬದಲಿ ಇನ್ನೂ ಎರಡು ಬಾರಿ ಅವಕಾಶವಿದೆ ಎಂದು ಮಕ್ಕಳಿಗೆ ತಿಳಿಸಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಬಗೆಯ ಮೊಬೈಲ್ ಫೋನ್, ಕ್ಯಾಲ್ಕುಲೇಟರ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವುದನ್ನು ಮತ್ತು ಪರೀಕ್ಷಾ ಅವಧಿಯಲ್ಲಿ ಕೊಠಡಿ ಮೇಲ್ವಿಚಾರಕರು ಮೊಬೈಲ್ ಬಳಕೆ ಮಾಡುವುದನ್ನು ಸಹ ನಿಷೇಧಿಸಲಾಗಿದ್ದು, ಈ ಬಗ್ಗೆ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್ ಅವರು ಮಾತನಾಡಿ, ಈ ಬಾರಿಯ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗೆ 23,001 ಹೊಸ ವಿದ್ಯಾರ್ಥಿಗಳು ಸೇರಿ ಜಿಲ್ಲೆಯ ಒಟ್ಟು 25,556 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದು, ಜಿಲ್ಲೆಯ ಗಂಗಾವತಿ ತಾಲ್ಲೂಕಿನ 23, ಕೊಪ್ಪಳ ತಾಲ್ಲೂಕಿನ 21, ಕುಷ್ಟಗಿ ತಾಲ್ಲೂಕಿನ 15 ಹಾಗೂ ಯಲಬುರ್ಗಾ ತಾಲ್ಲೂಕಿನ 14 ಸೇರಿದಂತೆ ಒಟ್ಟು 74 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬ ಮುಖ್ಯ ಅಧೀಕ್ಷಕರು ಹಾಗೂ ಪ್ರಶ್ನೆಪತ್ರಿಕೆ ಅಭಿರಕ್ಷಕರನ್ನು ನೇಮಿಸಲಾಗಿದೆ ಹಾಗೂ ಕೊಪ್ಪಳ, ಗಂಗಾವತಿ, ಕುಷ್ಟಗಿ ಮತ್ತು ಯಲಬುರ್ಗಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆಯಾ ವಿಭಾಗಗಳ ಪ್ರಶ್ನೆ ಪತ್ರಿಕೆ ಪಾಲಕರಾಗಿರುತ್ತಾರೆ. ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಹಾಗೂ ವೀಕ್ಷಕರಿಗೆ ಈಗಾಗಲೇ ಮಾರ್ಗಸೂಚಿಗಳನ್ನು ನೀಡಲಾಗಿದೆ. ಪ್ರಶ್ನೆಪತ್ರಿಕೆಗಳ ಸುರಕ್ಷತೆ, ವಿದ್ಯಾರ್ಥಿಗಳ ಕುಳಿತುಕೊಳ್ಳುವ ವ್ಯವಸ್ಥೆ, ಪರೀಕ್ಷಾ ಸಾಮಗ್ರಿಗಳ ಲಭ್ಯತೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ, ಮುನಿರಾಬಾದ್‌ನಲ್ಲಿರುವ ಜಿಲ್ಲಾ ತರಬೇತಿ ಸಂಸ್ಥೆ ಡಯೆಟ್ ಪ್ರಾಶುಂಪಾಲರಾದ ಅನಂತಕುಮಾರ ಸೇರಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವಿಷಯ ಪರಿವೀಕ್ಷಕರು, ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು, ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ತಾಲ್ಲೂಕು ನೋಡಲ್ ಅಧಿಕಾರಿಗಳು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ನಾವೀನ್ಯ ಬೋಧನಾ ತಂತ್ರಗಳಿಂದ ವಿದ್ಯಾರ್ಥಿಗಳ ಭವಿಷ್ಯ ರೂಪಿಸಬೇಕು: ಪ್ರೊ. ಶುಭಾಂಗಿ



ಕಲಬುರಗಿ,ಮಾ.10-

ಉನ್ನತ ಶಿಕ್ಷಣ ಸಂಸ್ಥೆಗಳು ಹಾಗೂ ಕಾಲೇಜುಗಳ ಅಧ್ಯಾಪಕರು ನಾವೀನ್ಯ ಬೋಧನಾ ತಂತ್ರಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳ ಭವಿಷ್ಯ ರೂಪಿಸಬೇಕು. ವಿಷಯದ ಅರಿವು, ಆಸಕ್ತಿ, ಸಕ್ರಿಯ ಕಲಿಕೆ ಹಾಗೂ ತಂತ್ರಜ್ಞಾನ ಬಳಕೆಗೆ ಪ್ರೋತ್ಸಾಹ ನೀಡಬೇಕು ಎಂದು ಕಲಬುರಗಿ ವಿಟಿಯು ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕಿ ಪ್ರೊ. ಶುಭಾಂಗಿ ಡಿ.ಸಿ. ಸಲಹೆ ನೀಡಿದರು.

ನಗರದ ಗುಲ್ಬರ್ಗಾ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ರೂಸಾ/ಪಿಎಂ-ಉಷಾ, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ, ಗುಲ್ಬರ್ಗಾ ವಿಶ್ವವಿದ್ಯಾಲಯ ಹಾಗೂ ರಿಲಯನ್ಸ್ ಫೌಂಡೇಶನ್ ಸ್ಕಿಲ್ಲಿಂಗ್ ಅಕಾಡೆಮಿ ಮತ್ತು ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ''ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ನಾವೀನ್ಯ ಬೋಧನಾ ತಂತ್ರಗಳು ಮತ್ತು ಪಠ್ಯಕ್ರಮ ಚೌಕಟ್ಟು'' ಕುರಿತ ಫ್ಯಾಕಲ್ಟಿ ಡೆವಲಪ್‌ಮೆಂಟ್ ಪ್ರೋಗ್ರಾಂ (ಎಫ್‌ಡಿಪಿ) ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಬದಲಾಗುತ್ತಿರುವ ಶೈಕ್ಷಣಿಕ ಕ್ಷೇತ್ರಕ್ಕೆ ಅನುಗುಣವಾಗಿ ಶಿಕ್ಷಣದ ಬೆಳವಣಿಗೆ, ಪಠ್ಯಕ್ರಮ ಚೌಕಟ್ಟು, ಬೋಧನಾ ವಿಧಾನ ಹಾಗೂ ತಂತ್ರಜ್ಞಾನ ಬಳಕೆಗೆ ಹೆಚ್ಚಿನ ಒತ್ತು ನೀಡಬೇಕು. ವಿಷಯದ ಗ್ರಹಿಕೆಗೆ ಜೊತೆಗೆ ಎಐ ಹಾಗೂ ರೋಬೋಟ್ ತಂತ್ರಜ್ಞಾನಗಳ ಅರಿವು ಮೂಡಿಸಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸಬೇಕು ಎಂದು ಹೇಳಿದರು.

ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್‌ನ ತರಬೇತಿ ಅಧಿಕಾರಿ ಜೋಶುವಾ ಡೇನಿಯಲ್ ಮಾತನಾಡಿ, ವೃತ್ತಿಪರ ಸಂಸ್ಥೆಗಳ ಅಗತ್ಯ ಕೌಶಲ್ಯ ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳ ಕಲಿಕೆ ವಿಧಾನಗಳ ನಡುವಿನ ಅಂತರ ಕಡಿಮೆಗೊಳಿಸಲು ಶಿಕ್ಷಣದ ಜೊತೆಗೆ ವೃತ್ತಿ ಕೌಶಲ್ಯ, ವೃತ್ತಿ ಜ್ಞಾನ ಹಾಗೂ ಅನುಭವವನ್ನು ವಿದ್ಯಾರ್ಥಿಗಳಿಗೆ ನೀಡಬೇಕು ಎಂದರು. ಉದ್ಯಮ ಕ್ಷೇತ್ರಕ್ಕೆ ವಿದ್ಯಾರ್ಥಿಗಳು ಸಜ್ಜಾಗಲು ಅಧ್ಯಾಪಕರು ಹೊಸ ಜ್ಞಾನ ಮತ್ತು ತಂತ್ರಜ್ಞಾನ ಕಲಿಕೆಗೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಜೆಕಾರ್ತಿಕೇಯ ತರಬೇತಿ ಸಲಹಾ ಸಂಸ್ಥೆಯ ಸಿಇಓ ಡಾ. ಅಭಯ್ ಸರ್ದೇಶ್‌ಪಾಂಡೆ ಮಾತನಾಡಿ, ಇಂದಿನ ಗುಣಮಟ್ಟದ ಶಿಕ್ಷಣದೊಂದಿಗೆ ಮಾನವನ ನಡವಳಿಕೆಯಲ್ಲಿ ಬದಲಾವಣೆ ಅಗತ್ಯ. ಈ ತರಬೇತಿಯಿಂದ ಶಿಕ್ಷಕರು ಪ್ರಾಯೋಗಿಕ ಹಾಗೂ ಸಂವಾದಾತ್ಮಕ ಬೋಧನೆಗೆ ಒತ್ತು ನೀಡುವ ಮೂಲಕ ಶೈಕ್ಷಣಿಕ ಸುಧಾರಣೆಗೆ ಸಹಕಾರಿಯಾಗಲಿದೆ ಎಂದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ್ ಎಸ್. ಉಡಿಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಬೋಧನೆ ಶಿಕ್ಷಕರ ವೃತ್ತಿ ಜೀವನದ ಅವಿಭಾಜ್ಯ ಅಂಗವಾಗಿದೆ. ವಿಶ್ವವಿದ್ಯಾಲಯ ಮತ್ತು ಕಾಲೇಜುಗಳು ಮಾನ್ಯತೆ ಹಾಗೂ ಉನ್ನತ ಶಿಕ್ಷಣದಲ್ಲಿ ಉತ್ಕೃಷ್ಟತೆ ಸಾಧಿಸಲು ಫ್ಯಾಕಲ್ಟಿ ಡೆವಲಪ್‌ಮೆಂಟ್ ಕಾರ್ಯಕ್ರಮಗಳು ಮಹತ್ವದ್ದಾಗಿವೆ ಎಂದು ಹೇಳಿದರು.

ವಿದ್ಯಾ ವಿಷಯಕ ಪರಿಷತ್ ಸದಸ್ಯ ಪ್ರೊ. ಹೂವಿನಭಾವಿ ಬಾಬಣ್ಣ, ಮೌಲ್ಯಮಾಪನ ಕುಲಸಚಿವ ಪ್ರೊ. ಎನ್.ಜಿ. ಕಣ್ಣೂರು, ಹಣಕಾಸು ಅಧಿಕಾರಿ ಜಯಾಂಬಿಕಾ ಉಪಸ್ಥಿತಿರಿದ್ದರು. ಅನ್ವಯಿಕ ವಿದ್ಯುನ್ಮಾನ ವಿಭಾಗದ ಹಿರಿಯ ಪ್ರಾಧ್ಯಾಪಕ ಹಾಗೂ ಕಾರ್ಯಕ್ರಮ ಸಂಯೋಜಕ ಪ್ರೊ. ಆರ್. ಎಲ್ ರಾಯಭಾಗಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕುಲಸಚಿವ ಪ್ರೊ. ರಮೇಶ್ ಲಂಡನ್ಕರ್ ಅತಿಥಿ ಗಣ್ಯರನ್ನು ಸ್ವಾಗತಿಸಿದರು. ಪ್ರೊ. ಮಲಶೆಟ್ಟಿ, ಡಾ. ಸುರೇಶ್ ಜಂಗೆ ಹಾಗೂ ಡಾ. ಟಿ. ನಿಂಗಣ್ಣ ಅತಿಥಿಗಳನ್ನು ಪರಿಚಯಿಸಿದರು. ಸಂಗೀತಾ ವಿಭಾಗದ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಡಾ. ಎಂ. ಬಿ. ಕಟ್ಟಿ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು. ವಿವಿಧ ನಿಕಾಯಗಳ ಡೀನರು, ಸಿಂಡಿಕೇಟ್ ಸದಸ್ಯರು, ವಿದ್ಯಾ ವಿಷಯಕ ಪರಿಷತ್ ಸದಸ್ಯರು, ಸ್ನಾಕತೋತ್ತರ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು, ಗುಲಬರ್ಗಾ ವಿಶ್ವವಿದ್ಯಾಲಯದ ಪದವಿ ಮಹಾವಿದ್ಯಾಲ ಯಗಳ ಅಧ್ಯಾಪಕರು ಹಾಗೂ ರಿಲಯನ್ಸ್ ಫೌಂಡೇಶನ್ ಸ್ಕಿಲ್ಲಿಂಗ್ ಅಕಾಡೆಮಿ ಸದಸ್ಯರಾದ ರೇಖಾ ಕುಮಾರಿ, ಜಾಬೆಜ್, ಪೌಜಿತ ಭಾಗವಹಿಸಿದ್ದರು.

ಜನಗಣತಿ ಕಾರ್ಯ ಜವಾಬ್ದಾರಿಯಿಂದ ನಿರ್ವಹಿಸಿ-ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್



ಬಳ್ಳಾರಿ,ಮಾ.10-

ದಶಕದ ಪ್ರಕ್ರಿಯೆಯಾದ ದೇಶದ ಪ್ರಮುಖ ಜನಗಣತಿ' ಕಾರ್ಯ ಪುನಾರಂಭಗೊಳ್ಳುತ್ತಿದ್ದು, ಈ ಕುರಿತು ಅಧಿಕಾರಿ-ಸಿಬ್ಬಂದಿ ಸೂಕ್ತ ತರಬೇತಿ ಪಡೆದುಕೊಂಡು ಜವಾಬ್ದಾರಿಯಿಂದ ಜನಗಣತಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾಡಳಿತ ವತಿಯಿಂದ ಜನಗಣತಿ-2027 ಕಾರ್ಯ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು, ಚಾರ್ಜ್ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳಿಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೋವಿಡ್ ಸಾಂಕ್ರಾಮಿಕ ರೋಗದ ಕಾರಣದಿಂದ ವಿಳಂಬವಾಗಿದ್ದ 2021ರ ಜನಗಣತಿಯನ್ನು ಈಗ ಭಾರತ ಸರ್ಕಾರದ ಆದೇಶದಂತೆ ಹೊಸದಾಗಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಬಾರಿಯ ಜನಗಣತಿಯಲ್ಲಿ ಮೊದಲ ಬಾರಿಗೆ ತಂತ್ರಜ್ಞಾನಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ದತ್ತಾಂಶಗಳನ್ನು ಆನ್‌ಲೈನ್ ಮೂಲಕವೇ ಸಂಗ್ರಹಿಸಲಾಗುತ್ತದೆ ಎಂದು ಅವರು ತಿಳಿಸಿದರು.

ಏಪ್ರಿಲ್ 01 ರಿಂದ 15 ರ ವರೆಗೆ ಸಾರ್ವಜನಿಕರಿಗೆ ಸ್ವಯಂ ಗಣತಿಗೆ ಅವಕಾಶ ಮತ್ತು ಏಪ್ರಿಲ್ 16 ರಿಂದ ಮೇ 16 ರವರೆಗೆ ಮನೆ ಪಟ್ಟಿ ಮಾಡುವ ಕ್ಷೇತ್ರ ಕಾರ್ಯ ನಡೆಯಲಿದೆ. ಈ ಹಿಂದಿನ ಸಾಮಾಜಿಕ-ಆರ್ಥಿಕ ಸಮೀಕ್ಷೆಗಿಂತ ಈ ಬಾರಿಯ ಜನಗಣತಿ ಪ್ರಕ್ರಿಯೆ ಸರಳವಾಗಿರಲಿದ್ದು, ಕನಿಷ್ಟ ಮತ್ತು ಅಗತ್ಯ ಮಾಹಿತಿಗಳನ್ನು ಮಾತ್ರ ಸಂಗ್ರಹಿಸಲಾಗುತ್ತದೆ ಎಂದರು.

ಜನಗಣತಿ ಕಾರ್ಯಕ್ಕೆ ನೆರವಾಗಲು ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಸಹಾಯಕರು ಮತ್ತು ಮಲ್ಟಿ ಟಾಸ್ಕಿಂಗ್ ಸ್ಟಾಫ್‌ಗಳನ್ನು ಏಜೆನ್ಸಿಗಳ ಮೂಲಕ ನೇಮಿಸಿಕೊಳ್ಳಲಾಗುತ್ತಿದೆ. ಗಣತಿ ಅವಧಿಯಲ್ಲಿಯೇ ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕೂಡಾ ನಡೆಯಲಿದೆ ಎಂದು ಹೇಳಿದರು.

ಗಣತಿ ಪ್ರಕ್ರಿಯೆಯು ಆರಂಭದಿಂದ ಮುಕ್ತಾಯದವರೆಗೆ ನಿರ್ವಹಿಸಲು ಜನಗಣತಿ ನಿರ್ವಹಣೆ ಮತ್ತು ಮಾನಿಟರಿಂಗ್ ಸಿಸ್ಟಂ (ಸಿಎಂಎಂಎಸ್) ಎಂಬ ವಿಶೇಷ ವೆಬ್ ಪೋರ್ಟಲ್ ಅಭಿವೃದ್ಧಿಪಡಿಸಲಾಗಿದೆ. ಹಾಗಾಗಿ ಅಧಿಕಾರಿಗಳು ಈ ಮೂರು ದಿನಗಳ ತರಬೇತಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಗಣತಿ ಪ್ರಕ್ರಿಯೆಯ ಬಗ್ಗೆ ಇರುವ ತಾಂತ್ರಿಕ ಅನುಮಾನಗಳನ್ನು ಬಗೆಹರಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಜನಗಣತಿ ಪ್ರಕ್ರಿಯೆಯಲ್ಲಿ ಈ ಬಾರಿ ಎಚ್.ಎಲ್.ಒ ಆಪ್ ಇಂಗ್ಲೀಷ್ ಜೊತೆಗೆ ಕನ್ನಡದಲ್ಲೂ ಲಭ್ಯವಿದ್ದು, ಇದು ಸ್ಥಳೀಯ ಸಿಬ್ಬಂದಿಗೆ ಸಹಕಾರಿಯಾಗಲಿದೆ. ಈ ಬಾರಿಯ ಪ್ರಶ್ನಾವಳಿಯಲ್ಲಿ ಇಂಟರ್ನೆಟ್ ಬಳಕೆ ಸೇರಿದಂತೆ ಕೆಲವು ಹೊಸ ಮತ್ತು ಗೌಪ್ಯ ಮಾಹಿತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸೇರಿಸಲಾಗಿದೆ. ಇಂಟರ್ನೆಟ್ ಸಮಸ್ಯೆ ಇರುವ ಗುಡ್ಡಗಾಡು ಪ್ರದೇಶಗಳಲ್ಲಿ ಅನುಕೂಲವಾಗುವಂತೆ ಆಫ್‌ಲೈನ್‌ನಲ್ಲಿ ಡೇಟಾ ಉಳಿಸಿ ನಂತರ ಸಿಂಕ್ ಮಾಡುವ ಆಯ್ಕೆಯನ್ನು ನೀಡಲಾಗಿದೆ ಎಂದು ತಿಳಿಸಿದರು.

ತಹಶೀಲ್ದಾರರು ಮತ್ತು ನಗರ ಸ್ಥಳೀಯ-ಸಂಸ್ಥೆಗಳ ಮುಖ್ಯಾಧಿಖಾರಿಗಳು ಮೊದಲು ತಾವೇ ಆಪ್ ಬಳಸಿ ಲಾಗಿನ್ ಆಗುವ ಮೂಲಕ ತಂತ್ರಜ್ಞಾನದ ಬಗ್ಗೆ ಪರಿಚಿತರಾಗಬೇಕು. ಇದರಿಂದ ಅವರು ತಮ್ಮ ಕೆಳಗಿನ ಸಿಬ್ಬಂದಿಗೆ ಸರಿಯಾದ ಮಾರ್ಗದರ್ಶನ ನೀಡಲು ಸಾಧ್ಯವಾಗುತ್ತದೆ. ಕೊನೆಯಲ್ಲಿ, ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಜನಗಣತಿಯನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಗಣತಿ ಉದ್ದೇಶಕ್ಕಾಗಿ ಬ್ಲಾಕ್ ರಚಿಸಲಾಗುತ್ತಿದ್ದು, 700ರಿಂದ 800 ಜನಸಂಖ್ಯೆಗೆ ಒಬ್ಬ ಗಣತಿದಾರರನ್ನು ಮತ್ತು ಪ್ರತಿ ಆರು ಜನ ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗುವುದು ಎಂಉ ತಿಳಿಸಿದರು.

ಗಣತಿದಾರರಿಗಿಂತ ಉನ್ನತ ಶ್ರೇಣಿಯ ಅಧಿಕಾರಿಗಳನ್ನು ಮೇಲ್ವಿಚಾರಕರ ಹುದ್ದೆಗೆ ಪರಿಗಣಿಸಲಾಗುತ್ತದೆ. ಗ್ರಾಮೀಣ ಭಾಗದಲ್ಲಿ ತಹಶೀಲ್ದಾರರು ಹಾಗೂ ನಗರ ಪ್ರದೇಶಗಳಲ್ಲಿ ನಗರಸಭೆ, ಪುರಸಭೆಯ ಮುಖ್ಯಾಧಿಕಾರಿಗಳು ಉಸ್ತುವಾರಿ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಪ್ರಧಾನ ಜನಗಣತಿ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದು, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಯುಕ್ತರು ಈ ಜವಾಬ್ದಾರಿ ನಿಭಾಯಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಬಳಿಕ ಕಾರ್ಯಾಗಾರದಲ್ಲಿ ಜನಗಣತಿ ಕಾರ್ಯಾಚರಣೆಯ ನಿರ್ದೇಶನಾಲಯದ ಡಿಡಿಸಿಓ ಕೆ.ಜ್ಞಾನ ಪ್ರಕಾಶಂ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ, ಜನಗಣತಿ ಪ್ರಕ್ರಿಯೆ ಕುರಿತು ಸವಿವರವಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಸೇರಿದಂತೆ ಐದು ತಾಲ್ಲೂಕುಗಳ ತಹಶೀಲ್ದಾರರು, ನಗರ- ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಇತರೆ ಅಧಿಕಾರಿ- ಸಿಬ್ಬಂದಿ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಕರಾಟೆ ತರಬೇತಿ ಅಗತ್ಯ: ವಿಠ್ಠಲ್ ಜಾಬಗೌಡರ



ಕೊಪ್ಪಳ,ಮಾ.10-

ಇಂದಿನ ದಿನಗಳಲ್ಲಿ ಸ್ವಯಂರಕ್ಷಣೆಗಾಗಿ ಕರಾಟೆ ಅತೀ ಅಗತ್ಯವಾದ ಕ್ರೀಡೆಯಾಗಿದ್ದು, ಎಲ್ಲರೂ ಕಲಿಯಬೇಕಾದ ಕ್ರೀಡೆಯಾಗಿದೆ. ಕರಾಟೆಯನ್ನು ಎಲ್ಲ ಶಾಲೆಕಾಲೇಜುಗಳಲ್ಲಿ ಕಡ್ಡಾಯವಾಗಿ ಕಲಿಸುವಂತಾಗಬೇಕು ಎಂದು ಕೊಪ್ಪಳ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ ಹೇಳಿದರು.

ನಗರದ ಗದಗ ರಸ್ತೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರಾಟೆ ಇಂಡಿಯಾ ಆರ್ಗನೈಜೇಷನ್ ಹಾಗೂ ನ್ಯಾಷನಲ್ ಸ್ಪಿರಿಟ್ ಕರಾಟೆ ಅಕಾಡಮಿ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ವಿದ್ಯಾರ್ಥಿನಿಯರ ಕರಾಟೆ ಪ್ರದರ್ಶನ ಹಾಗೂ ಬೆಲ್ಟ್ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿನಿಯರಿಗೆ ಡ್ರ್ಯಾಗನ್ ಸ್ಟಿಕ್ ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ದೈಹಿಕವಾಗಿ ಶಕ್ತಿವಂತರಾಗಲು ಹಾಗೂ ಆರೋಗ್ಯಕರ ಮನಸ್ಸು ಬೆಳೆಸಲು ಕ್ರೀಡೆಗಳು ಸಹಕಾರಿಯಾಗುತ್ತವೆ. ಕರಾಟೆ ತರಬೇತಿಯಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹಾಗೂ ಏಕಾಗ್ರತೆ ಹೆಚ್ಚುತ್ತದೆ ಎಂದು ಹೇಳಿದರು.

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಿರುವುದು ಅರ್ಥಪೂರ್ಣವಾಗಿದೆ. ವಿವಿಧ ಶಾಲೆಗಳ ವಿದ್ಯಾರ್ಥಿನಿಯರು ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಿ ಬೆಲ್ಟ್ ಪಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಎಪಿಜೆ ಅಬ್ದುಲ್ ಕಲಾಂ ಸಿಬಿಎಸ್ಸಿ ಶಾಲೆ ಲಿಂಗದಳ್ಳಿ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ತಳಕಲ್ ಹಾಗೂ ಹಿಟ್ನಾಳ ಶಾಲೆಯ ಸುಮಾರು 250 ವಿದ್ಯಾರ್ಥಿನಿಯರು 202526ನೇ ಸಾಲಿನಲ್ಲಿ ಪಡೆದ ಕರಾಟೆ ತರಬೇತಿಯ ಪ್ರದರ್ಶನ ನೀಡಿದರು. ಇದೇ ಸಂದರ್ಭದಲ್ಲಿ ಅವರಿಗೆ ಬೆಲ್ಟ್ ಹಾಗೂ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಪ್ರಾಸ್ತಾವಿಕವಾಗಿ ನ್ಯಾಷನಲ್ ಸ್ಪೀರಿಟ್ ಕರಾಟೆ ಅಕಾಡಮಿ ಮುಖ್ಯಸ್ಥ ರಾಜಾಬಕ್ಷಿ ಎಚ್.ವಿ ನೆರವೇರಿಸಿದರು. ಅಧ್ಯಕ್ಷತೆಯನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಅಜ್ಮೀರ್ ಅಲಿ ವಹಿಸಿದ್ದರು. ವೇದಿಕೆಯ ಮೇಲೆ ನ್ಯಾಷನಲ್ ಶುಟೋಕಾನ್ ಕರಾಟೆ ಅಸೋಶಿಯೇಷನ್ ಕರ್ನಾಟಕದ ಅಧ್ಯಕ್ಷರಾದ ಬಿ.ಬಾಷಾಸಾಹೇಬ, ಹಿರಿಯ ಹೋರಾಟಗಾರ ನಜೀರ್ ಮೂಲಿಮನಿ, ಮಾಜಿ ನಗರಸಭಾ ಸದಸ್ಯ ಮಾನ್ವಿ ಪಾಷಾ, ತರಬೇತುದಾರರಾದ ದೀಪಾ ಮತ್ತು ರೋಹಿಣಿ ಉಪಸ್ತಿತರಿದ್ದರು. ನಿರೂಪಣೆಯನ್ನು ದಾವಲಸಾಬ ಬೆಟಗೇರಿ ನಡೆಸಿಕೊಟ್ಟರು. ವಂದನಾರ್ಪಣೆಯನ್ನು ದೇವಪ್ಪ ಕಲ್ಲನ್ನವರ ಮಾಡಿದರು.

ಬಳ್ಳಾರಿ: ಶ್ರೀಶೈಲಂಗೆ ವಿಶೇಷ ಸಾರಿಗೆ ಸೌಲಭ್ಯ

ಬಳ್ಳಾರಿ,ಮಾ.10-

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದಿಂದ ಶ್ರೀಶೈಲಂಗೆ ಹೋಗಲು ಮಾ.10 ರಿಂದ 20 ರ ವರೆಗೆ ವಿಶೇಷ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ಮೋಕಾ, ಕುರುಗೋಡು, ಕಂಪ್ಲಿ, ಎಮ್ಮಿಗನೂರು, ಸಿರುಗುಪ್ಪ, ತೆಕ್ಕಲಕೋಟೆ, ಹಳೇಕೋಟೆ, ತೋರಣಗಲ್ಲು, ಸಂಡೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಯುಗಾದಿ ಹಬ್ಬದ ಪ್ರಯುಕ್ತ ಶ್ರೀ ಭ್ರಮರಾಂಬಾ ಮಲ್ಲಿಕಾರ್ಜುನ ಸ್ವಾಮಿಯ ವಿಶೇಷ ದರ್ಶನಕ್ಕಾಗಿ ಶ್ರೀಶೈಲಂಗೆ ಹೋಗುತ್ತಿದ್ದು, ಭಕ್ತಾಧಿಗಳ ಅನುಕೂಲಕ್ಕಾಗಿ ಈ ವಿಶೇಷ ಸಾರಿಗೆ ಸೌಲಭ್ಯ ಒದಗಿಸಲಾಗಿದೆ.

ಮಾಹಿತಿಗಾಗಿ ಬಳ್ಳಾರಿ-1ನೇ ಘಟಕ'ದ' ವ್ಯವಸ್ಥಾಪಕರು-7760992163, ಬಳ್ಳಾರಿ-2ನೇ ಘಟಕ ವ್ಯವಸ್ಥಾಪಕರು-7760992164, ಸಿರುಗುಪ್ಪ ಘಟಕ ವ್ಯವಸ್ಥಾಪಕರು-7760992165, ಕುರುಗೋಡು ಘಟಕ ವ್ಯವಸ್ಥಾಪಕರು-9606483671, ಸಂಡೂರು ಘಟಕ ವ್ಯವಸ್ಥಾಪಕರು-7760992309 ಗೆ ಸಂಪರ್ಕಿಸಬಹುದು.

ಈ ಸಾರಿಗೆ ಸೇವೆಯನ್ನು ಭಕ್ತಾಧಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆಗೆ ಮುಂಜಾಗ್ರತೆ ಕೈಗೊಳ್ಳಿ- ಡಾ. ಟಿ.ಲಿಂಗರಾಜು

ಕೊಪ್ಪಳ ಮಾ.10-

ಜಿಲ್ಲೆಯಾದ್ಯಂತ ಪ್ರಸ್ತುತ ತಿಂಗಳಿನಿಂದ ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಕಂಡುಬಂದ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ತಮ್ಮ ಆರೋಗ್ಯದ ರಕ್ಷಣೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು ಅವರು ತಿಳಿಸಿದ್ದಾರೆ. ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಸಂದರ್ಭದಲ್ಲಿ ಸಾರ್ವ ಜನಿಕರು ಕೈಗೊಳ್ಳಬೇಕಾದ ಕ್ರಮಗಳ ಕುರಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಎಲ್ಲಾ ಸಾರ್ವಜನಿಕರಿಗೆ ಸಲಹೆಗಳನ್ನು ನೀಡಿದ್ದು, ಬೇಸಿಗೆ ಸಮಯದಲ್ಲಿ ಹೆಚ್ಚು ನೀರನ್ನು ಕುಡಿಯಬೇಕು. ಮಜ್ಜಿಗೆ ಅಥವಾ ಎಳನೀರು, ಹಣ್ಣಿನ ರಸವನ್ನು ಹೆಚ್ಚಾಗಿ ಸೇವಿಸಬೇಕು. ನೀರಿನ ಅಂಶ ಹೆಚ್ಚಾಗಿರುವ ತರಕಾ ರಿಗಳು, ಹಣ್ಣುಗಳನ್ನು ಸೇವಿಸುವುದು ಉತ್ತಮ. ಸಡಿಲವಾದ ತೆಳು ಬಣ್ಣದ ಹತ್ತಿಯ ಬಟ್ಟೆಯನ್ನು ಧರಿಸಬೇಕು ಹಾಗೂ ಗಾಳಿಯಾಡುವ ಪಾದರಕ್ಷೆ ಧರಿಸಬೇಕು. ಹೊರಗಡೆ ತೆರಳುವ ವೇಳೆ ತಂಪು ಕನ್ನಡಕ, ಛತ್ರಿ, ಟವೆಲ್ ಅಥವಾ ಬಿಸಿಲಿನಿಂದ ಕಾಪಾಡಿಕೊಳ್ಳುವ ಸಾಮಾನ್ಯ ಕ್ರಮಗಳನ್ನು ಪಾಲಿಸಬೇಕು. ರೇಡಿಯೊ, ದೂರದರ್ಶನ ಹಾಗೂ ದಿನಪತ್ರಿ ಕೆಗಳಲ್ಲಿ ಬಿಸಿಯಾದ ಗಾಳಿ ಅಥವಾ ಶಾಖ ತರಂಗ(ಹೀಟ್ ವೇವ್)ದ ಬಗ್ಗೆ ನೀಡುವ ಮಾಹಿತಿ ಅನುಸಾರ ದೈನಂದಿನ ಚಟುವಟಿಕೆಗಳನ್ನು ಯೋಜಿಸಿಕೊಳ್ಳಬೇಕು. ಬಿಸಿಲಿನಲ್ಲಿ ಹೊರಗಡೆ ಕಾರ್ಯನಿರ್ವಹಿಸುವವರು (ಜಮೀನು ಕೆಲಸ, ರಸ್ತೆ ಕಾಮಗಾರಿ ಮುಂತಾದವು) ಆದಷ್ಟು ಬೆಳಗ್ಗೆ 11 ಗಂಟೆಯ ಒಳಗೆ ಮತ್ತು ಸಂಜೆ 4 ಗಂಟೆ ನಂತರ ಕೈಗೊಳ್ಳುವುದು ಉತ್ತಮ. ಈ ಅವಧಿಯಲ್ಲಿ ಶ್ರಮ ದಾಯಕ ಕೆಲಸಗಳಿಂದ ವಿಶ್ರಾಂತಿ ಪಡೆಯಬೇಕು. ಬಿಸಿಲಿನಲ್ಲಿ ನಡೆಯು ವಾಗ ಕಡ್ಡಾಯವಾಗಿ ಚಪ್ಪಲಿ ಧರಿಸಿ. ಟೀ ಅಥವಾ ಕಾಫಿ, ಹೆಚ್ಚು ಸಕ್ಕರೆ ಅಂಶವನ್ನು ಹೊಂದಿರುವ ಕಾರ್ಬೋನೇಟೆಡ್ ಪಾನೀಯ ಹಾಗೂ ಮದ್ಯ ಪಾನದಿಂದ ದೂರವಿರಿ. ವ್ಯಕ್ತಿ ತೊದಲು ಮಾತು ಅಥವಾ ಅರ್ಥ ರಹಿತವಾಗಿ ಬಡಬಡಿಸಿದಲ್ಲಿ ಕೂಡ ಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿ. ಕೆಳಗೆ ಮಲಗಿಸಿ ಕಾಲುಗಳನ್ನು ಮೇಲಕ್ಕೆ ಎತ್ತಿ ವಿಶ್ರಾಂತಿ ಪಡೆಯಿರಿ. ಬಿಸಿಗಾಳಿ ಮತ್ತು ಅತಿಯಾದ ತಾಪಮಾನ ದಿಂದ ಆರೋಗ್ಯ ಸಮಸ್ಯೆಗಳು ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ ಅಥವಾ 108/102 ಕ್ಕೆ ಕರೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

ಒಂದನೇಯ ಪುಟದಿಂದ

ಭಯ ಹುಟ್ಟಿಸುತ್ತಿರುವ ಚಿರತೆ ದಾಳಿ-ಜಾನುವಾರು ಸಾವು

ಶಾಶ್ವತ ಪರಿಹಾರಕ್ಕೆ ಒತ್ತಾಯ :ಅರಕೇರಾ ಸುತ್ತಮುತ್ತಲ ಅರಣ್ಯ ಪ್ರದೇಶ ಹಾಗೂ ಗುಡ್ಡಗಳ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸಾಕುಪ್ರಾಣಿಗಳ ಮೇಲೆ ಚಿರತೆಗಳು ನಿರಂತರ ದಾಳಿ ಮಾಡುತ್ತಿದ್ದು ರೈತರು ಸಂಕಷ್ಟ ಸಿಲುಕಿದ್ದಾರೆ. ಅರಣ್ಯ ಇಲಾಖೆ ಕಣ್ಣುಮುಚ್ಚಿ ಕುಳಿತಿದೆ. ನಮಗೆ ಶಾಶ್ವತ ಪರಿಹಾರ ಬೇಕು ಎಂದು ವೆಂಕಟೇಶ್ ನಾಯಕ ಕರ್ನಾಳ ಮಾಜಿ ಗ್ರಾ. ಪಂ. ಸ ಆಗ್ರಹಮಾಡಿದ್ದಾರೆ.

ಇನ್ನೂ ಮುಂದಾದರೂ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಬೇಟಿ ನೀಡಿ ಚಿರತೆದಾಳಿ ತಪ್ಪಿಸಬೇಕು. ಚಿರತೆ ಹಾವಳಿಗೆ ರೈತರಿಗೆ ರಾತ್ರಿವೇಳೆ ಹೊಲಗದ್ದೆಗಳಿಗೆ ನೀರುಹಾಯಿಸಲು ಭಯಬೀತರಾಗಿದ್ದು. ಚಿರತೆ ಸೇರೆಹಿಡಿಯಲು ಬೋನ್ ಇಡುವಂತೆ ರೈತರು ಹಾಗೂ ಸಾರ್ವಜನಿಕರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

11ರ ಬಂದ್‌ಗೆ ಮಾದಿಗ ದಂಡೋರ ಎಂಆರ್‌ಪಿಎಸ್ ಬೆಂಬಲ

ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಂಜಿತ ದಂಡೋರ, ದುಳ್ಳಯ್ಯ ಗುಂಜಹಳ್ಳಿ, ದಾವೀದ್ ಮರ್ಚೆಟಹಾಳ್, ಹನುಮಂತ ಜಾಲಮಗೇರಾ ಹಾಗೂ ಸುರೇಶ್ ದುಗನೂರು ಉಪಸ್ಥಿತರಿದ್ದರು.

ಸ್ನೇಹಿತರ ಕೈಯಲ್ಲಿ ಅಪ್ರಾಪ್ತ ಬಾಲಕನ ಕೊಲೆಯೋ, ಸಹಜ ಸಾವೊ?..

ಹೊರತೆಗೆದಿದ್ದಾರೆ. ಈ ಸಂಬಂಧ ಮೃತ ಬಾಲಕನ ತಂದೆ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಘಟನೆಗೆ ನಿಖರ ಕಾರಣ ಏನು ಎಂಬುದರ ಕುರಿತು ಪೊಲೀಸರು ತನಿಖೆ ಮುಂದುವರೆಸಿದ್ದಾರೆ. ಗ್ರಾಮದಲ್ಲಿ ಈ ಘಟನೆಗೆ ಸಂಬಂಧಿಸಿ ಶೋಕ ವಾತಾವರಣ ನಿರ್ಮಾಣವಾಗಿದೆ.

ಮಹಿಳೆಯರು ಸ್ವಾಭಿಮಾನಿಗಳಾಗುತ್ತಿರುವುದು ವಿಶೇಷ

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ಅಂತಾರಾಷ್ಟ್ರಿಯ ಮಹಿಳಾ ದಿನಾಚರಣೆ ಅಂಗವಾಗಿ ರಂಗೋಲಿ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಶಿಕ್ಷಣ, ರಾಜಕೀಯ, ಶೈಕ್ಷಣಿಕ, ವಿಜ್ಞಾನ, ಸಾಂಸ್ಕೃತಿಕ, ಕ್ರೀಡೆ ಸೇರಿದಂತೆ ಪ್ರತಿಯೊಂದು ಕ್ಷೇತ್ರಗಳಲ್ಲೂ ಮಹಿಳೆ ತನ್ನದೇ ಆದ ಛಾಪು ಮೂಡಿಸಿದ್ದಾಳೆ. ಅಂತಾರಾಷ್ಟ್ರಿಯ ಮಹಿಳಾ ದಿನದ ನಿಮಿತ್ತ ಹಮ್ಮಿಕೊಂಡ ರಂಗೋಲಿ ಸ್ಪರ್ಧೆಯು ಹೆಣ್ಣಿನ ಸಾಮರ್ಥ್ಯಕ್ಕೆ ಕನ್ನಡಿ ಹಿಡಿದಿದೆ ಎಂದರು.

ಮಹಿಳಾ ದಿನಾಚರಣೆಯು ಹೆಣ್ಣು ಮಕ್ಕಳ ಅಸ್ತಿತ್ವ, ಗುರಿ ಸಾಧನೆಯನ್ನು ಜಗದೆಲ್ಲಡೆ ಪಸರಿಸುವ ಮಹತ್ವದ ದಿನವಾಗಿದ್ದು, ಇಡೀ ಮಾರ್ಚ್ ತಿಂಗಳು ಮಹಿಳೆಯರ ಕಾರ್ಯ ಚಟುವಟಿಕೆಗಳನ್ನು ಗುರುತಿಸುವ ಕಾರ್ಯ ನಿರಂತರವಾಗಿ ನಡೆಯುವುದು. ಹೆಣ್ಣು ತಾಯಿಯಾಗಿ, ಸಹೋದರಿಯಾಗಿ, ಸ್ನೇಹಿತೆ ಯಾಗಿ, ಪತ್ನಿಯಾಗಿ, ಮಗಳಾಗಿ ತನ್ನದೇ ಆದ ಪಾತ್ರಗಳನ್ನು ನಿಭಾಯಿಸುತ್ತಾಳೆ ಎಂದರು.

ಬಹುಬಣ್ಣದ ರಂಗೋಲಿ ಚಿತ್ತಾರ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಇಲಾಖೆಯ ಮಹಿಳಾ ಸಿಬ್ಬಂದಿಯಿದ ನಡೆದ ರಂಗೋಲಿ ಸ್ಪರ್ಧೆಯು ಸ್ತಿ ಶಕ್ತಿಯನ್ನು ಪ್ರತಿಬಿಂಬಿಸುವತಿತ್ತು.

ಭ್ರೂಣದ ಹಂತದಿದಲೇ ಹೆಣ್ಣಿನ ಕಾಳಜಿ ಮಾಡಿದಲ್ಲಿ ಮಹಿಳೆಯು ಕೇವಲ ತನಗಾಗಿಯಲ್ಲ, ಸಮಾಜಕ್ಕೆ, ದೇಶಕ್ಕೆ ಕೊಡುಗೆಗಳನ್ನು ನೀಡುವ ಅದ್ಬುತ ಸಾಧಕಿಯಾಗುತ್ತಾಳೆ ಎಂಬುದನ್ನು ನಾಗರತ್ನ ಅವರ ರಂಗೋಲಿ ಸಂದೇಶ ನೀಡಿತು.

ಯಾವುದೇ ವೃತ್ತಿಪರ ಕಲಾವಿದರಿಗೆ ಕಡಿಮೆ ಇಲ್ಲದಂತೆ ಧೈರ್ಯದಿಂದ ಮುಖ ಭಾವನೆಯೊಂದಿಗೆ ಹೆಣ್ಣಿನ ಜೀವನದ ಕನಸುಗಳಿಗೆ ಬಣ್ಣ ತುಂಬಿ ಎಂಬ ಕನಸಿನ ಸಂದೇಶವನ್ನು ಸುವರ್ಣ ಅವರ ರಂಗೋಲಿ ತಿಳಿಸಿತು.

ಮಹಿಳೆಯು ತನ್ನ ಆಲೋಚನೆಗಳನ್ನು ಕೃತಿರೂಪಕ್ಕೆ ಇಳಿಸಿ, ದೃಢ ವಿಶ್ವಾಸ, ಸಹನೆ, ಪ್ರಾಮಾಣಿಕತೆ, ಧೈರ್ಯ, ಮಮತೆ, ತಾಯ್ತನವನ್ನು ಪ್ರಕೃತಿಯ ರೂಪದಲ್ಲಿ ಕೊಂಡೊಯ್ಯುವ ಪ್ರಯತ್ನ ಮಾಡುವ ಅರ್ಥವನ್ನು ಶಾಲಿನಿ ಅವರ ರಂಗೋಲಿ ಹೊರಹೊಮ್ಮಿಸಿತು.

ನಾರಿಶಕ್ತಿ ಸಮಾಜದ ಪ್ರಗತಿ ಎಂಬುದನ್ನು ಗ್ರಾಮೀಣ ಸೊಗಡಿನಲ್ಲಿ ತನ್ನ ಮಗುವನ್ನು ಮಮತೆಯ ಸಮುದ್ರದಲ್ಲಿ ತೇಲಿಸುವ ಪರಿಯುಳ್ಳ ಅದ್ಬುತ ಕಲೆಯೊಂದಿಗೆ ಯಾವುದೇ ಜವಾಬ್ದಾರಿ ಪರಿಪೂರ್ಣವಾಗಿಸುವ ಗಟ್ಟಿತನವನ್ನು ತೋರಿಸುವ ಪ್ರಯತ್ನದ ಅರ್ಥವನ್ನು ಗೀತಾ ಅವರು ತಮ್ಮ ರಂಗೋಲಿ ಮೂಲಕ ನೀಡಿದರು. ಮೇಘನಾ ಅವರು ಬಿಡಿಸಿದ ರಂಗೋಲಿಯು, ಆರೋಗ್ಯಕರ ತಾಯಿಗೆ ಆರೋಗ್ಯವಂತ ಮಗು, ಅದರಲ್ಲೂ ಹೆಣ್ಣು ಮಗು ಪ್ರಕೃತಿಯ ವರದಾನ, ಭ್ರೂಣ ಹತ್ಯೆ ಶಿಕ್ಷಾರ್ಹ ಅಪರಾಧ, ಹೆಣ್ಣುಮಗು ಉಳಿಸಿ, ಬೆಳಿಸಿ ಎಂಬ ಸಂದೇಶವನ್ನು ನೀಡಿತು.

ಲಕ್ಷ್ಮಿ ಅವರ ರಂಗೋಲಿಯು ಆರೋಗ್ಯ ಸುರಕ್ಷತೆಯಿಂದ ಸುಂದರ ಬದುಕು ಸಾಧ್ಯ ಎಂದು ಕೈಯಲ್ಲಿ ಹಣತೆಯೊಂದಿಗೆ ಹೆಜ್ಜೆ ಹಾಕುವ ದೃಶ್ಯ ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಬೇಕು ಎಂಬ ಸಂದೇಶವನ್ನು ನೀಡಿತು.

ಈ ವೇಳೆ ತೀರ್ಪುಗಾರರಾದ ಡಾ.ಶೀಲ ಶ್ರೀ ಅವರು ಮತನಾಡಿ, ಅತ್ಯುತ್ತಮ ರಚನೆ ಎನ್ನುವುದಕ್ಕಿಂತ ಯಾವುದೇ ರೇಖಾಚಿತ್ರ ಬಳಸದೆ ಬಿಡಿಸಿದ ರಂಗೋಲಿಗಳನ್ನು ಅಂತಿಮಗೊಳಿಸಿದ್ದು, ಬಹುಮಾನವನ್ನು ಮುಂದಿನ ದಿನಗಳಲ್ಲಿ ವೇದಿಕೆಯಲ್ಲಿ ಗಣ್ಯರ ಸಮ್ಮುಖದಲ್ಲಿ ನೀಡಲಾಗುವುದೆಂದು ತಿಳಿಸಿದರು.

ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆ: ಆರೋಗ್ಯ ಕಾಪಾಡಲು ಜಿಲ್ಲಾಧಿಕಾರಿ ನಿತೀಶ್ ಕೆ. ಸಾರ್ವಜನಿಕರಲ್ಲಿ ಮನವಿ

ಮಾಡುತ್ತದೆ. ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಬೇಕು.

ಆದಷ್ಟು ಫ್ಯಾನಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು. ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ಕಲ್ಲಂಗಡಿ, ಕರಬೂಜ, ಕಿತ್ತಳೆ ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು, ಹಿರಿಯ ನಾಗರಿಕರು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.

ಸಾರ್ವಜನಿಕರು ಏನು ಮಾಡಬಾರದು: ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ/ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಿ. ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ಅಲ್ಲದೆ ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ. ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಬೇಕು. ಅಡುಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಯಿರಿ. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ಪಾನೀಯಗಳನ್ನು ಸೇವಿಸಬೇಡಿ. ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ. ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು ಅಲ್ಲದೆ ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

''ಸುಬ್ಬಣ್ಣ ಮಾಸ್ತಾರ'' ಹೆಸರಿನಲ್ಲಿ ವೆಂಗಳಾಪುರ ತಾಂಡವನ್ನು ಕಂದಾಯ ಗ್ರಾಮ ಮಾಡುವ ಕ್ರಮಕ್ಕೆ ವಿರೋಧ

ಉಮ್ಲಾಪ್ಪ ತಂದೆ ಥಾವರೆಪ್ಪ, ಭದ್ರಮ್ಮ ಗಂಡ ರೂಮಣ್ಣ, ನೂರ್ಯ ತಂದೆ ವಾಚ್ಯ ಹಾಗೂ ಕರ್ನಾಟಕ ಸರ್ಕಾರದ ಹೆಸರಿನಲ್ಲಿ ಭೂಮಿ ನೀಡಲಾಗಿದೆ. ಆದರೆ, ಭೂದಾನಿಗಳು ಮತ್ತು ಸ್ಥಳೀಯ ನಿವಾಸಿಗಳಿಗೆ ಸಮರ್ಪಕ ಮಾಹಿತಿ ನೀಡದೇ ''ಸುಬ್ಬಣ್ಣ ಮಾಸ್ತಾರ'' ಹೆಸರಿನಲ್ಲಿ ಕಂದಾಯ ಗ್ರಾಮ ರಚಿಸಲು ಅಧಿಕಾರಿಗಳು ಮುಂದಾಗಿರುವುದು ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಈ ಸಂಬಂಧ 13-10-2025, 13-12-2025 ಹಾಗೂ 08-01-2026 ರಂದು ಜಿಲ್ಲಾಧಿಕಾರಿಗಳು ಮತ್ತು ಸಹಾಯಕ ಆಯುಕ್ತರಿಗೆ ತಕರಾರು ಅರ್ಜಿಗಳನ್ನು ಸಲ್ಲಿಸಿದ್ದರೂ ಅವುಗಳನ್ನು ಪರಿಗಣಿಸಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಕಂದಾಯ ಗ್ರಾಮ ರಚನೆ ಪ್ರಕ್ರಿಯೆಯಲ್ಲಿ ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ವರದಿ ಸಲ್ಲಿಸಿದ ದೇವದುರ್ಗ ತಹಶೀಲ್ದಾರರು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಭೂ ಮಾಪಕರ ವಿರುದ್ಧ ವಿಶೇಷ ತನಿಖೆ ನಡೆಸಿ ಅವರನ್ನು ಅಮಾನತುಗೊಳಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ''ಸುಬ್ಬಣ್ಣ ಮಾಸ್ತಾರ'' ಹೆಸರಿನಲ್ಲಿ ಕಂದಾಯ ಗ್ರಾಮ ರಚನೆ ಮಾಡುವ ಅಧಿಸೂಚನೆಯನ್ನು ರದ್ದುಪಡಿಸಿ, ಸ್ಥಳೀಯ ದೇವಸ್ಥಾನದ ಹೆಸರಿನಲ್ಲಿ ''ರಾಮರಾವ್ ನಗರ'' ಎಂಬ ಹೆಸರಿನಲ್ಲಿ ಕಂದಾಯ ಗ್ರಾಮ ರಚಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಕೇಶವ ಜಾದವ್, ವೆಂಕಟೇಶ್ ಜಾದವ್ ಸೇರಿದಂತೆ ಉಪಸ್ಥಿತರಿದ್ದರು.

ಜಮೀನು ಒದಗಿಸಿದರೆ ಸಿಂಧನೂರಲ್ಲಿ ಜವಳಿ ಪಾರ್ಕ್

ಈ ಭೂಮಿಯನ್ನು ಜವಳಿ ಪಾರ್ಕ್ ಸ್ಥಾಪನೆಗೆ ಒದಗಿಸುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಪತ್ರ ಬರೆಯಲಿದೆ. ಕೇಂದ್ರ, ಸರ್ಕಾರ ಭೂಮಿ ಒದಗಿಸಿದರೆ ಪಿಪಿಪಿ ಮಾದರಿಯಲ್ಲಿ ಜವಳಿ ಪಾರ್ಕ್ ಸ್ಥಾಪನೆ ಬೇಡಿಕೆಯನ್ನು ಪರಿಶೀಲಿಸಲಾಗುವುದು ಎಂದು ಸಚಿವರಾದ ಶಿವಾನಂದ ಪಾಟೀಲ ಅವರು ತಿಳಿಸಿದರು.

ಮಾನಸಿಕ ಆರೋಗ್ಯಕ್ಕಾಗಿ ಟೆಲಿಮನಸ್ ಸಹಾಯವಾಣಿ 14416 ಸಂಪರ್ಕಿಸಿ: ಡಾ.ಯಲ್ಲಾ ರಮೇಶ್ ಬಾಬು



ಬಳ್ಳಾರಿ,ಮಾ.10-

ಮಾನಸಿಕ ಆರೋಗ್ಯ ಸಮಸ್ಯೆ, ಒತ್ತಡ ಇದ್ದಲ್ಲಿ ನೆರವು ಪಡೆಯಲು ಟೆಲಿಮನಸ್ ಸಹಾಯವಾಣಿ 14416 ಗೆ ಕರೆಮಾಡಿ ಉಚಿತ ಆಪ್ತಸಮಾಲೋಚನೆ ಪಡೆಯಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಕಾರ್ಯಕ್ರಮ ವಿಭಾಗದ ವತಿಯಿಂದ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ವೈದ್ಯಾಧಿಕಾರಿಗಳಿಗೆ, ಕ್ಷೇತ್ರ ಮಟ್ಟದ ಸಿಬ್ಬಂದಿಗೆ ಮಾನಸಿಕ ಆರೋಗ್ಯದ ನಿರ್ವಹಣೆ ಕುರಿತು ಸೋಮವಾರ ಏರ್ಪಡಿಸಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ವ್ಯಕ್ತಿಗೂ ಜೀವನದ ಯಾವುದಾದರೂ ಸನ್ನಿವೇಶಗಳಲ್ಲಿ ಮಾನಸಿಕ ಆರೋಗ್ಯ ಸಮಸ್ಯೆ ಕಂಡುಬರುವ ಸಾಧ್ಯತೆ ಇರುತ್ತದೆ. ಅಂತಹ ಸಂದರ್ಭದಲ್ಲಿ ಇನ್ನೊಬ್ಬರೊಂದಿಗೆ ವಿಷಯ ಹಂಚಿಕೊಳ್ಳುವ ಅಥವಾ ಸಮಸ್ಯೆಯ ತೀವ್ರತೆ ಹೆಚ್ಚಾದಾಗ ಮಾನಸಿಕ ತಜ್ಞರೊಂದಿಗೆ ತಪ್ಪದೇ ಸಮಾಲೋಚಿಸಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರವು ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಟೆಲಿಮನಸ್ ಎಂಬ 14416 ಉಚಿತ ಸಹಾಯವಾಣಿ ಕಾರ್ಯನಿರ್ವಹಿಸುತ್ತಿದ್ದು, ಕರೆ ಮಾಡಿ ಸೂಕ್ತ ನೆರವು ಪಡೆದುಕೊಳ್ಳಬಹುದು ಎಂದರು.

ಕರೆ ಮಾಡಿದವರ ವಿವರ ಗೌಪ್ಯವಾಗಿ ಇಡಲಾಗುವುದು. ಧ್ವನಿಮುದ್ರಣ ಆಗುವುದಿಲ್ಲ. ಪರೀಕ್ಷಾ ಒತ್ತಡಕೊಳ್ಳಗಾದವರು, ಕೌಟುಂಬಿಕ ಸಮಸ್ಯೆಗೊಳಗಾದವರು, ಆತ್ಮಹತ್ಯೆ ಆಲೋಚನೆ ಮಾಡುವರು, ಮಾದಕ ವಸ್ತು ವ್ಯಸನಿಗಳು, ಸಂಬಂಧಗಳ ಸಮಸ್ಯೆಯಲ್ಲಿ ಸಿಲುಕಿರುವವರು, ಜ್ಞಾಪಕ ಶಕ್ತಿ ತೊಂದರೆ ಉಳ್ಳವರು, ಆರ್ಥಿಕ ಒತ್ತಡದಲ್ಲಿ ಇರುವವರು ಅಥವಾ ಇತರೆ ಯಾವುದೇ ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಇದ್ದಲ್ಲಿ ಈ ಸಹಾಯವಾಣಿ ಮೂಲಕ ನೆರವು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ವಿರೇಂದ್ರ ಕುಮಾರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮಾನಸಿಕ ಆರೋಗ್ಯ ಸೇವೆಗಳನ್ನು ನೀಡಲು ಜಿಲ್ಲಾ ಮಟ್ಟದಿಂದ ಮನೋರೋಗ ತಜ್ಞ ಡಾ.ಕಿಶೋರ್ ಅವರ ನೇತೃತ್ವದಲ್ಲಿ ಪ್ರತಿ ಮೊದಲ ಮಂಗಳವಾರ ಸಿರುಗುಪ್ಪ, ಎರಡನೇ ಮಂಗಳವಾರ ಸಂಡೂರು,

ಮೂರನೇ ಮಂಗಳವಾರ ಕಂಪ್ಲಿ, ನಾಲ್ಕನೇ ಮಂಗಳವಾರ ಕುರುಗೋಡು ಹಾಗೂ ಪ್ರತಿ ತಿಂಗಳು 16ನೇ ತಾರೀಖು ಮೋಕ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಾನಸಿಕ ಆರೋಗ್ಯ ಸೇವೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಮನೋರೋಗ ತಜ್ಞ ಡಾ.ಕಿಶೋರ್ ಅವರು ಮಾನಸಿಕ ಕಾಯಿಲೆಗಳಾದ ಆತಂಕ, ಮಾನಸಿಕ ಖಿನ್ನತೆ, ಗಾಬರಿ, ಮನೋರೋಗ, ಚಿತ್ತವಿಕಲತೆ, ಮೇನಿಯಾ ಕಾಯಿಲೆ ಲಕ್ಷಣಗಳು ಮತ್ತು ಚಿಕಿತ್ಸೆಯ ಬಗ್ಗೆ ವಿವರವಾಗಿ ಮಾಹಿತಿ ಮೂಲಕ ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಮನೋ ಶಾಸ್ತ್ರಜ್ಞ ಶರ್ಮಸ್ ವಲಿ, ಮನೋ ಸಾಮಾಜಿಕ ಕಾರ್ಯಕರ್ತ ಶಾಂತಕುಮಾರ್, ಮನೋ ಶುಶ್ರೂಷಣಾಧಿಕಾರಿ ರಂಜೀತಾ ಸೇರಿದಂತೆ ಇತರೆ ಅಧಿಕಾರಿ-ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಶ್ರೀ ದೇವರ ದಾಸಿಮಯ್ಯ ಜಯಂತಿಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ: ಎಡಿಸಿ ಸಿದ್ರಾಮೇಶ್ವರ



ಕೊಪ್ಪಳ ಮಾ.10-


ಮಾರ್ಚ್ 23 ರಂದು ಜಿಲ್ಲಾ ಕೇಂದ್ರದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಕೊಪ್ಪಳ ಜಿಲ್ಲಾ ಮಟ್ಟದ ಶ್ರೀ ದೇವರ ದಾಸಿಮಯ್ಯ ಜಯಂತಿ ಆಚರಣೆಯನ್ನು ಮಾರ್ಚ್ 23 ರಂದು ಆಚರಿಸಲಾಗುವುದು. ಅಂದು ಬೆಳಿಗ್ಗೆ 8.30ಕ್ಕೆ ಶ್ರೀ ದೇವರ ದಾಸಿಮಯ್ಯ ಭಾವಚಿತ್ರದ ಮೆರವಣಿಗೆಯು ಬನ್ನಿಕಟ್ಟಿಯಿಂದ ಪ್ರಾರಂಭಗೊಂಡು ಸಾಹಿತ್ಯ ಭವನದವರೆಗೆ ಜರುಗಲಿದೆ. ನಂತರ ಬೆಳಿಗ್ಗೆ 10 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಪೂಜೆ, ಶ್ರೀ ದೇವರ ದಾಸಿಮಯ್ಯ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿವೆ. ಎಂದು ಅವರು ತಿಳಿಸಿದರು.

ಸಮಾರಂಭ ದಿನದಂದು, ಮೆರವಣಿಗೆ ಮಾರ್ಗದ ಸ್ವಚ್ಛತೆ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಮತ್ತು ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಸಂಬಂಧಿಸಿದ ಎಲ್ಲ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ದತೆಗಳನ್ನು ಕೈಗೊಳ್ಳಬೇಕು. ಜಯಂತಿ ದಿನದಂದು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ, ಎಲ್ಲಾ ಕಚೇರಿಗಳಲ್ಲಿ ಹಾಗೂ ಶಾಲಾ ಮತ್ತು ಕಾಲೇಜುಗಳಲ್ಲಿಯೂ ಜಯಂತಿ ಆಚರಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಸಮಾಜದ ಮುಖಂಡರಾದ ಶಿವಶಂಕರಪ್ಪ ಬನ್ನಿ, ನಾರಾಯಣಪ್ಪ ಹುಲಮನಿ, ವೀರಣ ಕೋಟಿ ಭಾಗ್ಯನಗರ, ಕೃಷ್ಣಗೌಡ ಮೇದಿಕೇರಿ, ವಿಠ್ಠಲ ಧುತ್ತಾರಗಿ, ಜ್ಯೋತಿ ಮೋನಿ, ಸವಿತಾ, ಪೂಜಾ ಗಾಳಿ, ಸುನಿತಾ ಶ್ಯಾವಿ, ವಸಂತಗೌಡ ಕೊಪ್ಪರದ ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



ಶ್ರೀ ಭಗವಾನ್ ಮಹಾವೀರ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ಕ್ರಮ- ಕರ್ಣಕುಮಾರ

ಕೊಪ್ಪಳ ಮಾ.10-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಮಾರ್ಚ್ 31 ರಂದು ಶ್ರೀ ಭಗವಾನ್ ಮಹಾವೀರ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್-2 ಸಭಾಂಗಣದಲ್ಲಿ ಶ್ರೀ ಭಗವಾನ್ ಮಹಾವೀರ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಶ್ರೀ ಭಗವಾನ್ ಮಹಾವೀರ ಜಯಂತಿ ಪ್ರಯುಕ್ತ ಸಮಾಜದ ಸಹಭಾಗಿತ್ವದಲ್ಲಿ ಮಾ. 31ರ ಬೆಳಿಗ್ಗೆ 8.30ಕ್ಕೆ ಮಹಾವೀರರ ಭಾವಚಿತ್ರದ ಮೆರವಣಿಗೆಯು ನಗರದ ಸಾಹಿತ್ಯ ಭವನದದಿಂದ ಆರಂಭಗೊಂಡು ಶ್ರೀ ಮುನಿ ಸೂರತ್ ಜೈನ ಮಂದಿರದವರೆಗೆ ನಡೆಯಲಿದೆ. ನಂತರ ಬೆಳಿಗ್ಗೆ 11.30ಕ್ಕೆ ನಗರದ ಎಂಪಿ ಪ್ಯಾಲೇಸ್ ನಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ಪೂಜೆ, ಶ್ರೀ ಭಗವಾನ್ ಮಹಾವೀರ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ಜರುಗಲಿವೆ ಎಂದರು.

ಶ್ರೀ ಭಗವಾನ್ ಮಹಾವೀರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಎಲ್ಲಾ ರೀತಿಯ ವ್ಯವ ಸ್ಥೆಯನ್ನು ಮಾಡಿಕೊಳ್ಳಲಾಗುತ್ತದೆ. ಈ ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರ ಸಹಕಾರವು ಅತ್ಯವಶ್ಯಕವಾಗಿದ್ದು, ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಸಮಾಜದ ಮುಖಂಡರಾದ ಮಹೇಂದ್ರ ಚೋಪ್ರಾ, ಹಾಗೂ ಮತ್ತಿತರರು ಸೇರಿದಂತೆ ವಿವಿಧ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಸಂವಿಧಾನ ಪೀಠಿಕೆ ಓದಿ ಮಗುವಿಗೆ ನಾಮಕರಣ



ಗಂಗಾವತಿ,ಮಾ.10-

ಸಾಮಾನ್ಯವಾಗಿ ಮಗುವಿನ ನಾಮಕರಣ ಸಂದರ್ಭದಲ್ಲಿ ಶುಭ ಘಳಿಗೆ, ಮುಹೂರ್ತ, ದಿನಾಂಕ ಹಾಗೂ ರಾಶಿನಕ್ಷತ್ರ ನಿಗದಿಪಡಿಸಿ ಪುರೋಹಿತರ ಸಮ್ಮುಖದಲ್ಲಿ ಕಾರ್ಯಕ್ರಮ ನಡೆಸುವುದು ವಾಡಿಕೆ. ಆದರೆ ಗಂಗಾವತಿ ತಾಲ್ಲೂಕಿನ ಒಂದು ಕುಟುಂಬ ಸಂವಿಧಾನದ ಪೀಠಿಕೆ ಓದಿ ಹಾಗೂ ಸಂವಿಧಾನ ಪಾಲಿಸುವ ಪ್ರತಿಜ್ಞೆ ಕೈಗೊಳ್ಳುವ ಮೂಲಕ ಮಗುವಿನ ನಾಮಕರಣ ಮಾಡಿ ಗಮನ ಸೆಳೆದಿದೆ.

ಗಂಗಾವತಿ ವಿಧಾನಸಭಾ ಕ್ಷೇತ್ರದ ಯಲಮಗೇರಿ ಗ್ರಾಮದ ದಲಿತ ಸಮುದಾಯದ ಮುಖಂಡ ಹಾಗೂ ಗುತ್ತಿಗೆದಾರ ರಾಮಣ್ಣ ಚೌಡಿಹನುಮಂತಮ್ಮ ದಂಪತಿ ತಮ್ಮ ಮೊಮ್ಮಗಳ ನಾಮಕರಣವನ್ನು ವಿಭಿನ್ನ ರೀತಿಯಲ್ಲಿ ನೆರವೇರಿಸಿದರು. ತಮ್ಮ ಪುತ್ರ ಮಂಜುನಾಥ ಹಾಗೂ ಸೊಸೆ ಯಲ್ಲಮ್ಮ ದಂಪತಿಗೆ ಜನಿಸಿದ ಮಗುವಿನ ನಾಮಕರಣ ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಓದುವ ಮೂಲಕ ಆಚರಣೆ ನಡೆಸಿದರು.

ಕೊಪ್ಪಳ ತಾಲ್ಲೂಕಿನ ಹಟ್ಟಿ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೊದಲು ಸಂವಿಧಾನ ಶಿಲ್ಪಿ ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಬಳಿಕ ಮಗುವನ್ನು ತೊಟ್ಟಿಲಿಗೆ ಹಾಕಿ ಸಂವಿಧಾನದ ಪೀಠಿಕೆ ಓದಿ, ಸಂವಿಧಾನವನ್ನು ಪಾಲಿಸುವ ಪ್ರತಿಜ್ಞೆ ಕೈಗೊಳ್ಳಲಾಯಿತು. ನಂತರ ಮಗುವಿಗೆ ಹಂಸ ಎಂದು ನಾಮಕರಣ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾ ಡಿದ ರಾಮಣ್ಣ ಚೌಡಿ, ''ನಾನು ಮತ್ತು ನನ್ನ ಕುಟುಂಬ ಭಗವಂತ ನಿಗಿಂತಲೂ ಹೆಚ್ಚು ಸಂವಿಧಾನದ ಮೇಲೆ ನಂಬಿಕೆ ಇಟ್ಟಿದ್ದೇವೆ. ನಮಗೆ ಸಂವಿಧಾನವೇ ಭಗವಂತನಂತಿದ್ದು, ಅದರ ಸಮ್ಮುಖದಲ್ಲಿ ಮೊಮ್ಮಗಳ ನಾಮಕರಣ ಮಾಡಿದ್ದೇವೆ'' ಎಂದು ಹೇಳಿದರು.



ಊಟದಲ್ಲಿ ಜಿರಳೆ ಪತ್ತೆ ಆರೋಪ: ಹಾಸ್ಟೆಲ್ ವಿದ್ಯಾರ್ಥಿಗಳಿಂದ ಪ್ರತಿಭಟನೆ

ಕೊಪ್ಪಳ,ಮಾ.10-

ರಾತ್ರಿಯ ಊಟದಲ್ಲಿ ಜಿರಳೆ ಪತ್ತೆಯಾಗಿದೆ ಎಂದು ಆರೋಪಿಸಿ ಎಸ್‌ಸಿ3 ಹಾಸ್ಟಲ್ ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ.

ಈ ವೇಳೆ ಎಸ್‌ಸಿ3 ಹಾಸ್ಟಲ್ ನಲ್ಲಿನ ಅವ್ಯವಸ್ಥೆ ಹಾಗೂ ವಾರ್ಡನ್ ಮತ್ತು ಸಿಬ್ಬಂದಿಗಳ ಬೇಜವಾಬ್ದಾರಿ ವರ್ತನೆ ಕುರಿತು ವಿದ್ಯಾರ್ಥಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳಿಗೆ ಬಾಳೆಹಣ್ಣು ನೀಡದಿರುವುದು, ಕೊಳೆತ ತರಕಾರಿಯಿಂದ ಅಡುಗೆ ತಯಾರಿಸುವುದು, ಸರಿಯಾಗಿ ಬೇಯದ ಊಟ ಬಡಿಸುವುದು ಸೇರಿದಂತೆ ಹಲವು ಸಮಸ್ಯೆಗಳು ಇರುವುದಾಗಿ ಅವರು ಆರೋಪಿಸಿದರು. ಈ ಸಮಸ್ಯೆಗಳನ್ನು ತಕ್ಷಣ ಪರಿಹರಿಸಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಯಾರಾದರೂ ಸಮಸ್ಯೆಗಳ ಬಗ್ಗೆ ಮಾತನಾಡಿದರೆ ''ನಿಮ್ಮ ಫೈಲ್ ತೆಗೆದುಕೊಂಡು ಬನ್ನಿ, ಹಾಸ್ಟಲ್‌ನಿಂದ ಅಮಾನತು ಮಾಡುತ್ತೇನೆ'' ಎಂದು ಬೆದರಿಕೆ ಹಾಕಲಾಗುತ್ತಿದೆ ಎಂದು ವಿದ್ಯಾರ್ಥಿಗಳು ದೂರಿದರು.

ಸ್ಥಳಕ್ಕೆ ಭೇಟಿ ನೀಡಿದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಮಾತನಾಡಿ, ವಾರ್ಡ ನ್‌ಗಳ ಕೊರತೆ ಇರುವುದರಿಂದ ಸಮಸ್ಯೆಗಳು ಉಂಟಾಗಿವೆ. ಸಾಧ್ಯವಾದಷ್ಟು ಉತ್ತಮ ಅಡುಗೆ ವ್ಯವಸ್ಥೆ ಮಾಡಲು ಪ್ರಯತ್ನಿಸುತ್ತೇವೆ. ಸಾಧ್ಯವಾಗದಿದ್ದರೆ ನಿಮಗೆ ದೊರೆಯಬೇಕಾದ ಹಣವನ್ನು ನೀಡುತ್ತೇವೆ ಎಂದು ಹೇಳಿದರು.

ಇದಕ್ಕೆ ವಿರೋಧ ವ್ಯಕ್ತಪಡಿಸಿದ ವಿದ್ಯಾರ್ಥಿಗಳು ವಾರ್ಡನ್ ಬಸವರಾಜ ಅವರನ್ನು ವರ್ಗಾವಣೆ ಮಾಡಬೇಕು ಹಾಗೂ ಹಾಸ್ಟಲ್‌ನಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಉಪ ನಿರ್ದೇಶಕರು ''ತಮಗೆ ಬೇಕಾದ್ದು ಮಾಡಿಕೊಳ್ಳಿ'' ಎಂದು ಹೇಳಿದರೆಂದು ಆರೋಪಿಸಿದ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿ ಧರಣಿಗೆ ಮುಂದಾದರು.

ವಿದ್ಯಾರ್ಥಿಗಳ ಆಕ್ರೋಶ ಹೆಚ್ಚುತ್ತಿದ್ದಂತೆ ಉಪ ನಿರ್ದೇಶಕ ಅಜ್ಜಪ್ಪ ಸೋಲಗಾಡ ಅವರು ಸ್ಥಳದಿಂದ ತೆರಳಿದರು. ಆದರೂ ವಿದ್ಯಾರ್ಥಿಗಳು ಧರಣಿಯನ್ನು ಮುಂದುವರಿಸಿದರು.

ಎಸಿ ಮಹೇಶ್ ಮಾಲಗಿತ್ತಿ ಅವರು ಪ್ರತಿಭಟನಾ ಸ್ಥಳಕ್ಕೆ ಬಂದು ಬೆಳಿಗ್ಗೆ ನಿಮ್ಮ ಸಮಸ್ಯೆ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದ ನಂತರ ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಕೈ ಬಿಟ್ಟರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಭಾರತವನ್ನು ಜಗತ್ತಿನ ಎದುರು ನಡುಬಗ್ಗಿ ನಿಲ್ಲುವಂತೆ ಮಾಡಿದ ಮಹಾತ್ಮ!



ಅವಕಾಶವಾದಿ ಅಧಿಕಾರಕ್ಕೆ ಬಂದರೆ ಆ ದೇಶದ ವಿದೇಶಾಂಗ ನೀತಿ, ಅಂತಾರಾಷ್ಟ್ರೀಯ ಸಂಬಂಧ, ಆಮದು-ರಫ್ತು ವಹಿವಾಟು ವಲಯದಲ್ಲಿ ಏನೆಲ್ಲ ಏರುಪೇರುಗಳಾಗುತ್ತವೆ; ಅದು ದೇಶದ ಜನರನ್ನು ಎಂತಹ ಅನಾಹುತಗಳಿಗೆ ದೂಡುತ್ತದೆ ಎಂಬುದಕ್ಕೆ ಭಾರತದ ಇಂದಿನ ಸ್ಥಿತಿ ಅತ್ಯುತ್ತಮ ಉದಾಹರಣೆಯಾಗಿದೆ.

ಗಲ್ಫ್ ಕೋ-ಆಪರೇಷನ್ ಕೌನ್ಸಿಲ್()- ಇದು ಪ್ರಾದೇಶಿಕ, ರಾಜಕೀಯ ಮತ್ತು ಆರ್ಥಿಕ ಒಕ್ಕೂಟವಾಗಿದ್ದು, ಮಿಲಿಟರಿ ಮೈತ್ರಿಯನ್ನೂ ಒಳಗೊಂಡಿದೆ. ಈ ಒಕ್ಕೂಟದಲ್ಲಿ ಬಹ್ರೈನ್, ಕುವೈತ್, ಒಮಾನ್, ಕತಾರ್, ಸೌದಿ ಅರೇಬಿಯಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ದೇಶಗಳು ಸೇರಿವೆ. ಈ ಎಲ್ಲ ಪರ್ಷಿಯನ್ ರಾಷ್ಟ್ರಗಳು ಮೊದಲಿನಿಂದಲೂ ಬಲಿಷ್ಠ ರಾಷ್ಟ್ರಗಳಾದ ರಷ್ಯಾ ಮತ್ತು ಅಮೆರಿಕದ ಸ್ನೇಹ ಸಂಪರ್ಕದಲ್ಲಿವೆ. ಇತ್ತೀಚಿನ ವರ್ಷಗಳಲ್ಲಿ ಅಮೆರಿಕ ಪರವಾಗಿದ್ದು, ಸೇನಾ ನೆಲೆಗಳನ್ನು ಹೊಂದಲು ಅವಕಾಶ ಮಾಡಿಕೊಟ್ಟಿವೆ.

ಇಸ್ರೇಲ್-ಅಮೆರಿಕ ಒಂದಾಗಿ ಇರಾನ್ ಮೇಲೆ ಯುದ್ಧ ಸಾರಿ, ಬಾಂಬ್‌ಗಳ ಸುರಿಮಳೆ ಸುರಿಸುತ್ತಿರುವ ಸದ್ಯದ ಸಂದರ್ಭದಲ್ಲಿ, ಅದಕ್ಕೆ ಪ್ರತಿಯಾಗಿ ಇರಾನ್ ಕೂಡ, ಇಸ್ರೇಲ್ ಮತ್ತು ಕೊಲ್ಲಿ ರಾಷ್ಟ್ರಗಳ ಅಮೆರಿಕದ ಸೇನಾ ನೆಲೆಗಳ ಮೇಲೆ ದಾಳಿ ಮಾಡುತ್ತಿದೆ. ಆ ಸಾವು-ನೋವು, ಕಷ್ಟ-ನಷ್ಟ ಅಂಕೆಗೆ ಸಿಗದಾಗಿದೆ.

ಇದರಿಂದ ಜರ್ಜರಿತಗೊಂಡಿರುವ ಕೊಲ್ಲಿ ರಾಷ್ಟ್ರಗಳ ರಾಯಭಾರಿಗಳು ಕಳೆದವಾರ ಮಾಸ್ಕೋಗೆ ಭೇಟಿ ನೀಡಿದ್ದರು. ಅಂದರೆ ಬಿಕ್ಕಟ್ಟು ಬಿಗಡಾಯಿಸಿದೆ. ಪರಿಸ್ಥಿತಿ ಕೈಮೀರಿಹೋಗಿದೆ. ಪರಿಹಾರಕ್ಕಾಗಿ ರಷ್ಯಾದ ಮೊರೆ ಹೋಗಿದ್ದಾರೆ. ರಷ್ಯಾದ ವಿದೇಶಾಂಗ ಸಚಿವ ಮತ್ತು ರಾಜತಾಂತ್ರಿಕ ಸರ್ಗಿ ಲಾವ್ರೋವ್‌ರನ್ನು ತುರ್ತಾಗಿ ಭೇಟಿಯಾಗಿ, ಯುದ್ಧ ನಿಲ್ಲಿಸುವಂತೆ, ಅದಕ್ಕೆ ವ್ಲಾದಿಮಿರ್ ಪುಟಿನ್ ಮಧ್ಯಸ್ಥಿಕೆ ವಹಿಸುವಂತೆ ವಿನಂತಿಸಿಕೊಂಡಿದ್ದಾರೆ.

ಜಿಸಿಸಿ ರಾಷ್ಟ್ರಗಳ ರಾಯಭಾರಿಗಳೊಂದಿಗೆ ಮಾತನಾಡಿದ ಸರ್ಗಿ ಲಾವ್ರೋವ್, ಅಮೆರಿಕಾ ಮತ್ತು ಇಸ್ರೇಲ್ ನಡೆಸಿದ ಇರಾನ್ ವಿರುದ್ಧದ ದಾಳಿಯನ್ನು ನೀವು ಖಂಡಿಸಿದ್ದೀರಾ? ಮಿನಾಬ್ ನಗರದಲ್ಲಿ ಅಮೆರಿಕಾಇಸ್ರೇಲ್ ದಾಳಿಯಿಂದ 170 ಶಾಲಾ ಮಕ್ಕಳು ಸಾವನ್ನಪ್ಪಿದ ಘಟನೆ ಬಗ್ಗೆ ನೀವು ಏನು ಹೇಳುತ್ತೀರ ಎಂದು ಅವರನ್ನೇ ಪ್ರಶ್ನಿಸಿದ್ದಾರೆ. ಮುಂದುವರೆದು, ಕೇವಲ ಇರಾನ್‌ಅನ್ನು ಮಾತ್ರ ಖಂಡಿಸುವಂತಹ ಯಾವುದೇ ಅಮೆರಿಕದ ನಿರ್ಣಯಗಳನ್ನು ಬೆಂಬಲಿಸಬಾರದು. ಅಮೆರಿಕಾ ಮತ್ತು ಇಸ್ರೇಲ್ ನಡೆಸುತ್ತಿರುವ ಕೃತ್ಯಗಳು ಇರಾನ್ ಮತ್ತು ಅದರ ಅರಬ್ ರಾಷ್ಟ್ರಗಳ ನಡುವೆ ಬಿರುಕುಂಟುಮಾಡಲು ಉದ್ದೇಶಿಸಲಾಗಿದೆ ಎಂಬ ಸತ್ಯವನ್ನು ಸಂತ್ರಸ್ತರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಇದೇ ಸಭೆಯಲ್ಲಿ ಭಾರತ ನಿಲುವು ಕುರಿತು ಮಾತನಾಡಿದ ಸರ್ಗಿ ಲಾವ್ರೋವ್, ಭಾರತದ ಬದಲಾದ ವಿದೇಶಾಂಗ ನೀತಿಯನ್ನು, ಅಂತಾರಾಷ್ಟ್ರೀಯ ಸ್ನೇಹ-ಸಂಬಂಧವನ್ನು, ಪ್ರಧಾನಿ ಮೋದಿಯವರ ಅವಕಾಶವಾದಿ ನಡೆಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಬ್ರಿಕ್ಸ್() ಒಕ್ಕೂಟದಲ್ಲಿ ಭಾರತದೊಂದಿಗೆ ಇರಾನ್, ಯುಎಇ ಇದ್ದರೂ; ಪರಸ್ಪರ ಅಭಿವೃದ್ಧಿಗಾಗಿ ಆ ದೇಶಗಳ ನಾಯಕರೊಂದಿಗೆ ನಿಂತು ವೇದಿಕೆ ಹಂಚಿಕೊಂಡಿದ್ದರೂ; ಇಸ್ರೇಲ್‌ಗೆ ಹೋಗಿ ಯುದ್ಧಕ್ಕೆ ಮುನ್ನುಡಿ ಬರೆದದ್ದು ಹೇಗೆ ಅಂತಾರಾಷ್ಟ್ರೀಯ ಸಂಬಂಧಗಳನ್ನು ಕೆಡಿಸುತ್ತದೆ ಎಂಬುದನ್ನು ಕಟುವಾಗಿ ಟೀಕಿಸಿದ್ದಾರೆ.

ಭಾರತದ ಬದಲಾದ ವಿದೇಶಾಂಗ ನೀತಿಯ ಫಲವಾಗಿ, ರಷ್ಯಾ ಕಚ್ಚಾ ತೈಲ ಬೆಲೆ ಏರಿಸಿದೆ. ಈ ಮುಂಚೆ, ಬ್ರೆಂಟ್ ದರಕ್ಕಿಂತ ಬ್ಯಾರಲ್‌ಗೆ 1013 ಡಾಲರ್ ಕಡಿಮೆ ದರದಲ್ಲಿ ತೈಲ ಮಾರುತ್ತಿತ್ತು. ಈಗ ಮಾರ್ಚ್ ಮತ್ತು ಏಪ್ರಿಲ್ ವಿತರಣೆಗಳಿಗೆ ಬ್ರೆಂಟ್ ದರಕ್ಕಿಂತ 45 ಡಾಲರ್ ಹೆಚ್ಚುವರಿ ದರ ಕೇಳಿದೆ. ಅಂದರೆ, ಒಂದು ಬ್ಯಾರೆಲ್ ಕಚ್ಚಾ ತೈಲಕ್ಕೆ 120 ಡಾಲರ್ ಕೊಟ್ಟು ಖರೀದಿಸಬೇಕಾಗಿದೆ. ಸ್ನೇಹದ ಆಧಾರದ ಮೇಲೆ ನೀಡುತ್ತಿದ್ದ ರಿಯಾಯಿತಿಗಳನ್ನು ಈಗ ವ್ಯಾಪಾರದ ದೃಷ್ಟಿಯಿಂದ ಪರಿಗಣಿಸಲಾಗುತ್ತಿದೆ ಎಂದೂ ಹೇಳಿದ್ದಾರೆ.

ಭಾರತ ತನ್ನ ಕಚ್ಚಾ ತೈಲದ ಅಗತ್ಯದ ಶೇ. 85-88ರಷ್ಟನ್ನು ಆಮದು ಮಾಡಿಕೊಳ್ಳುತ್ತದೆ. ದಿನಕ್ಕೆ ಸುಮಾರು 50 ಲಕ್ಷ ಬ್ಯಾರಲ್ ಕಚ್ಚಾ ತೈಲ ಭಾರತಕ್ಕೆ ಹರಿದು ಬರುತ್ತದೆ. ಈ ತೈಲದ ಬಹುಭಾಗ ಪರ್ಷಿಯನ್ ರಾಷ್ಟ್ರಗಳಿಂದ, ವಿಶೇಷವಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಹಾದುಬರುತ್ತದೆ. ಈಗ ಇರಾನ್ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿದೆ. ಭಾರತಕ್ಕೆ ತುರ್ತು ಪರಿಸ್ಥಿತಿ ಎದುರಾಗಿದೆ.

ಏತನ್ಮಧ್ಯೆ, ಅಮೆರಿಕದ ಅಧ್ಯಕ್ಷ ಟ್ರಂಪ್ ಕೊಂಚ ಧಾರಾಳತನ ತೋರಿ, ರಷ್ಯಾದ ತೈಲ ಖರೀದಿಗೆ 30 ದಿನಗಳ ತಾತ್ಕಾಲಿಕ ವಿನಾಯಿತಿ ನೀಡಿದ್ದರೂ, ರಷ್ಯಾ ವಿಧಿಸುತ್ತಿರುವ ಈ ಹೆಚ್ಚಿನ ಬೆಲೆಯು ಭಾರತದ ಸಂಸ್ಕರಣಾ ಘಟಕಗಳಿಗೆ ಹೊಸ ಸವಾಲೊಡ್ಡಿದೆ. ಇದು ಭಾರತದಲ್ಲಿ ಇಂಧನ-ಅನಿಲ ಕೊರತೆಗೆ ಕಾರಣವಾಗಿದೆ. ಈಗಾಗಲೇ ವಾಣಿಜ್ಯ ಬಳಕೆಯ ಅಡುಗೆ ಅನಿಲ ಸಿಲಿಂಡರ್ ಸರಬರಾಜು ಸ್ಥಗಿತಗೊಂಡಿದೆ. ಹೋಟೆಲ್-ರೆಸ್ಟೋರೆಂಟ್‌ಗಳು ಬಂದ್‌ಗೆ ಕರೆ ಕೊಟ್ಟಿವೆ.

ಇದಲ್ಲದೆ, ಕೊಲ್ಲಿ ರಾಷ್ಟ್ರಗಳಲ್ಲಿ ಭಾರತದ ಒಂದು ಕೋಟಿ ಪ್ರಜೆಗಳು ಉದ್ಯೋಗ ಮಾಡುತ್ತಾ ಜೀವನ ನಿರ್ವಹಿಸುತ್ತಿದ್ದಾರೆ. ಇರಾನಿನಲ್ಲಿಯೂ ಭಾರತದ ಅಸಂಖ್ಯ ಪ್ರಜೆಗಳು ವಿದ್ಯಾಭ್ಯಾಸ ಹಾಗೂ ಉದ್ಯೋಗಕ್ಕಾಗಿ ನೆಲೆಸಿದ್ದಾರೆ. ಯುದ್ಧದಿಂದಾಗಿ ಹಣಕಾಸಿನ ಹರಿವು ನಿಂತಿದೆ. ಇವರ ರಕ್ಷಣೆ ಮತ್ತು ಸುರಕ್ಷತೆ ದೇಶದಲ್ಲಿ ಕಳವಳಕಾರಿ ವಾತಾವರಣವನ್ನು ಸೃಷ್ಟಿಸಿದೆ.

ಕಳೆದ ಸೆಪ್ಟೆಂಬರ್‌ನಲ್ಲಿ ರಷ್ಯಾದ ಪುಟಿನ್, ಭಾರತದ ಮೋದಿ- ಇಬ್ಬರೂ ಚೀನಾಕ್ಕೆ ಭೇಟಿ ನೀಡಿದ್ದರು. ಆ ಸಂದರ್ಭದಲ್ಲಿ ನನ್ನ ಹತ್ಯೆಗೆ ಸಂಚು ನಡೆದಿತ್ತು, ಪುಟಿನ್ ನನ್ನ ಜೀವ ಉಳಿಸಿದರು ಎಂದು ಹೇಳಿ ಪುಟಿನ್‌ರನ್ನು ಅಪ್ಪಿ ಮುದ್ದಾಡಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ ಗಿಟ್ಟಿಸಿದ್ದ ಮೋದಿಯವರು, ಕೇವಲ ಆರು ತಿಂಗಳ ಅವಧಿಯಲ್ಲಿ ಚೀನಾ-ರಷ್ಯಾಕ್ಕೆ ಬೆನ್ನು ತಿರುಗಿಸಿ, ಅಮೆರಿಕ ಅಧ್ಯಕ್ಷ ಟ್ರಂಪ್ ಕೈಗೊಂಬೆಯಾದರು. ಇಸ್ರೇಲಿನ ರಕ್ತದಾಹಿ ನೆತನ್ಯಾಹು ಅವರನ್ನು ಅಪ್ಪಿಕೊಂಡರು. ಬ್ರಿಕ್ಸ್‌ನ ಭಾಗವಾಗಿದ್ದ ಇರಾನ್‌ನಿಂದ ದೂರ ಸರಿದರು.

ಒಂದು ದೇಶದ ವಿದೇಶಾಂಗ ನೀತಿ ಎನ್ನುವುದು ಏಕಕಾಲಕ್ಕೆ ಆ ದೇಶ ಹಾಗೂ ಅದು ವಿಶ್ವದ ವಿವಿಧ ದೇಶಗಳೊಂದಿಗೆ ಹೊಂದಿರುವ ಸಂಬಂಧವನ್ನು ವ್ಯಾಖ್ಯಾನಿಸುತ್ತದೆ. ಅದು ದ್ವಿಪಕ್ಷೀಯ ಹಾಗೂ ಬಹುಪಕ್ಷೀಯ ಸಂಬಂಧಗಳ ಕುರಿತಾದ ನೀಲನಕ್ಷೆಯೂ ಆಗಿರುತ್ತದೆ. ದೇಶದ ಹಿತಾಸಕ್ತಿಗಳ ಸಂರಕ್ಷಣೆಯಲ್ಲಿ ಮುಖ್ಯಪಾತ್ರ ವಹಿಸುತ್ತದೆ. ಹೀಗಾಗಿ ವಿದೇಶಾಂಗ ನೀತಿಗೆ ಅಪಾರ ಮಹತ್ವವಿದೆ.

ಆದರೆ, ಒಬ್ಬ ಅವಕಾಶವಾದಿ ಅಧಿಕಾರಕ್ಕೆ ಬಂದರೆ ಆ ದೇಶದ ವಿದೇಶಾಂಗ ನೀತಿ, ಅಂತಾರಾಷ್ಟ್ರೀಯ ಸಂಬಂಧ, ಆಮದು-ರಫ್ತು ವಹಿವಾಟು ವಲಯದಲ್ಲಿ ಏನೆಲ್ಲ ಏರುಪೇರುಗಳಾಗುತ್ತವೆ; ಅದು ದೇಶದ ಜನರನ್ನು ಎಂತಹ ಅನಾಹುತಗಳಿಗೆ ದೂಡುತ್ತದೆ ಎಂಬುದಕ್ಕೆ ಭಾರತದ ಇಂದಿನ ಸ್ಥಿತಿ ಅತ್ಯುತ್ತಮ ಉದಾಹರಣೆಯಾಗಿದೆ. ಹಾಗೆಯೇ ಸ್ವಾಭಿಮಾನಿ ಸದೃಢ ಭಾರತವನ್ನು ಜಗತ್ತಿನ ಎದುರು ನಡುಬಗ್ಗಿ ನಿಲ್ಲುವಂತೆ ಮಾಡಿದ್ದು ಕೂಡ- ಭಾರತ ವಿಶ್ವಗುರು ಎನ್ನುವವರ ಮಹತ್ಸಾಧನೆಯೇ ಆಗಿದೆ.

ವಂದೇ ಮಾತರಂ' ಹೇರಿಕೆ ವಿರೋಧಿಸಿದ ಬಿಜೆಪಿ ಮಿತ್ರಪಕ್ಷ ಎನ್‌ಪಿಎಫ್ ಮೋದಿ ಪಾಲಿಗೆ ದೇಶದ್ರೋಹಿ ಆಗಲ್ವೇ?



ದೆಹಲಿಯ ಜೆಎನ್‌ಯು ವಿಶ್ವವಿದ್ಯಾಲಯದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದವರ ವಿರುದ್ಧ ಮತ್ತು ಬೀದರ್‌ನ ಶಾಲಾ ನಾಟಕವೊಂದರಲ್ಲಿ ಸಿಎಎ ವಿರುದ್ಧ ಮಾತನಾಡಿದ್ದಕ್ಕೆ ಮಕ್ಕಳ ಮೇಲೆ ದೇಶದ್ರೋಹ ಪಕ್ರರಣ ದಾಖಲಿಸುವ ಬಿಜೆಪಿ ಮತ್ತು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ತನ್ನದೇ ಮಿತ್ರಪಕ್ಷ ವಂದೇ ಮಾತರಂ ಗೀತೆ ಹೇರಿಕೆ ವಿರೋಧಿಸಿದಾಗ ಮೌನ ತಾಳುವುದೇಕೆ?

ಬಿಜೆಪಿ ಮತ್ತು ಅದರ ಅಂಗಸಂಸ್ಥೆಗಳು ದೇಶಭಕ್ತಿಯ ಅಳತೆಗೋಲಾಗಿ ವಂದೇ ಮಾತರಂ ಮತ್ತು ಭಾರತ್ ಮಾತಾ ಕೀ ಜೈ ಎಂಬ ಘೋಷಣೆಗಳನ್ನು ಬಳಸುತ್ತಿದೆ. ದೇಶದ ಗುಪ್ತ ಮಾಹಿತಿಯನ್ನು ಇತರೆ ದೇಶಕ್ಕೆ ನೀಡಿದರೂ ಪರವಾಗಿಲ್ಲ ವಂದೇ ಮಾತರಂ ಎಂದು ಹೇಳಿದರೆ ಸಾಕು ಆತ ದೇಶಭಕ್ತ ಎಂದು ಹೇಳುವ ಜಾಯಮಾನ ಬಿಜೆಪಿಯದ್ದು. ಆದರೆ ನಾಗಾಲ್ಯಾಂಡ್‌ನಂತಹ ಈಶಾನ್ಯ ರಾಜ್ಯಗಳಲ್ಲಿ ಬಿಜೆಪಿಯ ಈ ನಿಲುವು ಬದಲಾಗಿದೆ. ಅಧಿಕಾರ ಉಳಿಸಿಕೊಳ್ಳಲು ನಮ್ಮ ಸಿದ್ಧಾಂತವನ್ನೇ ಬುಡಮೇಲು ಮಾಡಿಕೊಳ್ಳಲು ಸಜ್ಜು ಎಂಬಂತೆ ವರ್ತಿಸುತ್ತಿದೆ ಬಿಜೆಪಿ.

''ವಂದೇ ಮಾತರಂ ಅಥವಾ ಭಾರತ್ ಮಾತಾ ಕಿ ಜೈ ಎಂದು ಹೇಳದವರು, ವಂದೇ ಮಾತರಂ ಗೀತೆ ಹಾಡದವರು ದೇಶದ್ರೋಹಿಗಳು'' ಎಂಬುದು ಬಿಜೆಪಿಯ ವಾದ. ಈ ವಿಚಾರದಲ್ಲೇ ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆ ಮುಂಚಿತವಾಗಿ ಲೋಕಸಭೆಯಲ್ಲಿ ವಂದೇ ಮಾತರಂ ಬಗ್ಗೆ ಚರ್ಚೆಗೆಳೆದು, ಕಾಂಗ್ರೆಸಿಗರು ದೇಶದ್ರೋಹಿಗಳು ಎಂಬ ಪಟ್ಟ ಕಟ್ಟಲು ಶತ ಪ್ರಯತ್ನ ಮಾಡಿತ್ತು. ಹಿಂದೂ ದೇವತೆಗಳ ಉಲ್ಲೇಖ ಇರುವುದರಿಂದ ಒಂದೇ ಧರ್ಮಕ್ಕೆ ಸಂಬಂಧಿಸಿದ ಗೀತೆ ಇದಾಗುತ್ತದೆ. ಆದ್ದರಿಂದ ವಂದೇ ಮಾತರಂ ಹೇರಿಕೆ ಮಾಡುವುದು ಸರಿಯಲ್ಲ ಎಂಬ ವಾದ ವಿಪಕ್ಷಗಳದ್ದು. ಈ ವಾದ ಮಾಡಿದವರೆಲ್ಲರೂ ಬಿಜೆಪಿ ಪಾಲಿಗೆ ದೇಶದ್ರೋಹಿಗಳಾದರು. ಆದರೆ ನಾಗಾಲ್ಯಾಂಡ್‌ನಲ್ಲಿ ಬಿಜೆಪಿಗೆ ತನ್ನ ಮಿತ್ರಪಕ್ಷ ನಾಗಾ ಪೀಪಲ್ಸ್ ಫ್ರಂಟ್ ಮಾತ್ರ ದೇಶದ್ರೋಹಿಯಂತೆ ಕಂಡಿಲ್ಲ ಎಂಬುದು ವಿಸ್ಮಯ.

ನಾಗಾಲ್ಯಾಂಡ್ ವಿಶ್ವವಿದ್ಯಾಲಯದ ಘಟಿಕೋತ್ಸವವೊಂದರಲ್ಲಿ ವಂದೇ ಮಾತರಂ ಗೀತೆಯನ್ನು ನುಡಿಸಿದಾಗ ಅಲ್ಲಿನ ವಿದ್ಯಾರ್ಥಿಗಳು ಎದ್ದು ನಿಲ್ಲದೆ ಕುಳಿತುಕೊಳ್ಳುವ ಮೂಲಕ ಪ್ರತಿಭಟಿಸಿದ್ದಾರೆ. ಅಷ್ಟಕ್ಕೂ ನಾಗಾಲ್ಯಾಂಡ್ ವಿದ್ಯಾರ್ಥಿಗಳು ಕೇವಲ ಒಂದು ಗೀತೆಗೆ ತೋರಿದ ವಿರೋಧವಲ್ಲ, ಬದಲಾಗಿ ಅಲ್ಲಿನ ಸಾಂಸ್ಕೃತಿಕ ಮತ್ತು ಧಾರ್ಮಿಕ ಅಸ್ಮಿತೆಯ ಪ್ರಶ್ನೆಯನ್ನು ಎತ್ತಿದ್ದಾರೆ. ಈ ಪ್ರತಿಭಟನೆಗೆ ಬಿಜೆಪಿ ಮಿತ್ರಪಕ್ಷ ನಾಗಾ ಪೀಪಲ್ಸ್ ಫ್ರಂಟ್ () ಬೆಂಬಲ ನೀಡಿದೆ.

ಬಂಕಿಮಚಂದ್ರ ಚಟರ್ಜಿಯವರು ಬರೆದ ವಂದೇ ಮಾತರಂ ಗೀತೆಯ ಕೆಲವು ಚರಣಗಳಲ್ಲಿ ಹಿಂದೂ ದೇವತೆಗಳಾದ ದುರ್ಗೆ ಮತ್ತು ಲಕ್ಷ್ಮಿಯ ಉಲ್ಲೇಖವಿದೆ. ಆದರೆ ನಮ್ಮದು ಸೌಹಾರ್ದ ದೇಶ. ಹಾಗಿರುವಾಗ ಒಂದು ಧರ್ಮದ ನಂಬಿಕೆಯನ್ನು ಇನ್ನೊಂದು ಧರ್ಮದ ಮೇಲೆ ಹೇರುವುದು ಸಂವಿಧಾನ ವಿರೋಧಿ ನಡೆ. ತೀವ್ರ ವಿರೋಧಗಳಿದ್ದರೂ ಫೆಬ್ರವರಿಯಲ್ಲಿ ಕೇಂದ್ರ ಗೃಹ ಸಚಿವಾಲಯವು ಸರ್ಕಾರಿ ಅಧಿಕೃತ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆಗೂ ಮುನ್ನ ವಂದೇ ಮಾತರಂನ ಎಲ್ಲಾ 6 ಚರಣಗಳನ್ನು ಹಾಡುಬೇಕು ಎಂದು ಆದೇಶಿಸಿದೆ. ಅದರಂತೆ ನಾಗಾಲ್ಯಾಂಡ್ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ವಂದೇ ಮಾತರಂ ಹಾಡು ನುಡಿಸಲಾಗಿದೆ.

ಆದರೆ ಇದು ಸಂವಿಧಾನದ 371() ವಿಧಿಯನ್ನು ವಿರೋಧಿಸಿದಂತೆ ಎಂಬುದು ವಿದ್ಯಾರ್ಥಿಗಳ ಆರೋಪ. ಸಂವಿಧಾನದ 371() ವಿಧಿಯು ನಾಗಾಲ್ಯಾಂಡ್ ರಾಜ್ಯಕ್ಕೆ ಸಂಬಂಧಿಸಿದ ವಿಶೇಷ ನಿಬಂಧನೆಗಳನ್ನು ಒಳಗೊಂಡಿದೆ. ಈ ವಿಧಿ ಪ್ರಕಾರ ಸಂಸತ್ತು ಮಾಡುವ ಯಾವುದೇ ಕಾಯ್ದೆಗಳು ನಾಗಾಲ್ಯಾಂಡ್ ರಾಜ್ಯ ವಿಧಾನಸಭೆಯ ಒಪ್ಪಿಗೆಯಿಲ್ಲದೆ ಆ ರಾಜ್ಯಕ್ಕೆ ಅನ್ವಯಿಸುವುದಿಲ್ಲ. ಕೇಂದ್ರದ ಯಾವುದೇ ಕಾನೂನು ಅಥವಾ ಆದೇಶವು ನಾಗಾಗಳ ಧಾರ್ಮಿಕ ನಂಬಿಕೆಗೆ ಧಕ್ಕೆ ತರುವಂತಿದ್ದರೆ ಅದನ್ನು ವಿರೋಧಿಸುವ ಹಕ್ಕು ಅವರಿಗಿದೆ. ವಿದ್ಯಾರ್ಥಿಗಳು ಈ ಪ್ರಶ್ನೆಯನ್ನು ಎತ್ತಿದ್ದಾರೆ, ಒಂದು ಧರ್ಮದ ದೇವತೆಗಳ ಉಲ್ಲೇಖವಿರುವ ಗೀತೆ ತಮ್ಮ ಧಾರ್ಮಿಕ ಮತ್ತು ಸಾಮಾಜಿಕ ಪದ್ಧತಿಗೆ ವಿರುದ್ಧವಾದುದ್ದು ಎಂದು ಧ್ವನಿ ಎತ್ತಿದ್ದಾರೆ. ಉಳಿದೆಡೆ ಈ ವಾದವನ್ನು ವಿರೋಧಿಸುವ, ದೇಶದ್ರೋಹಿಗಳೆಂದು ಕರೆಯುವ ಬಿಜೆಪಿ ಮತ್ತು ನರೇಂದ್ರ ಮೋದಿ ಅವರು ನಾಗಾಲ್ಯಾಂಡ್ ವಿಚಾರದಲ್ಲಿ ಮಾತ್ರ ಮೌನವಾಗಿದ್ದಾರೆ.

ಅಷ್ಟಕ್ಕೂ ನಾಗಾಲ್ಯಾಂಡ್ ಒಂದು ಕ್ರೈಸ್ತ ಬಹುಸಂಖ್ಯಾತ ರಾಜ್ಯ. ವಂದೇ ಮಾತರಂ ಎಂದರೆ ತಾಯ್ನಾಡನ್ನು ದೇವತೆಯಾಗಿ ಪೂಜಿಸುವುದು ಎಂದರ್ಥ. ಇದು ಸ್ಪಷ್ಟವಾಗಿ ಕ್ರೈಸ್ತ ಧರ್ಮದ ಏಕದೇವೋಪಾಸನೆಯ ನಂಬಿಕೆಗೆ ವಿರುದ್ಧವಾಗಿದೆ. ಅಷ್ಟು ಮಾತ್ರವಲ್ಲದೆ ಈ ಗೀತೆಯಲ್ಲಿ ಭಾರತ ಮಾತೆಯನ್ನು ದುರ್ಗಾ ದೇವಿಗೆ ಹೋಲಿಸಲಾಗಿದೆ, ದೇಶವು ಸಮೃದ್ಧಿಯಿಂದ ಕೂಡಿದ್ದು, ಕಮಲದ ಹೂವಿನ ಮೇಲೆ ನೆಲೆಸಿರುವ ಲಕ್ಷ್ಮಿ ದೇವಿಯಂತೆ ಕಂಗೊಳಿಸುತ್ತಿದೆ ಎಂಬ ಉಲ್ಲೇಖವಿದೆ. ಭಾರತ ಮಾತೆಯನ್ನು ಜ್ಞಾನ ಮತ್ತು ವಿದ್ಯೆಯ ದೇವತೆಯಾದ ಸರಸ್ವತಿಗೆ ಹೋಲಿಸಲಾಗಿದೆ. ಇವೆಲ್ಲವೂ ಹಿಂದೂ ಧರ್ಮ ಪಾಲಿಸುವವರ ನಂಬಿಕೆ. ಹಾಗಿದ್ದಾಗ ಇತರೆ ಧರ್ಮ ಪಾಲಿಸುವವರು ಒಪ್ಪಲು ಹೇಗೆ ಸಾಧ್ಯ? ಒಪ್ಪಬೇಕು ಎಂದು ಹೇಳುವುದು ಹೇರಿಕೆಯಲ್ಲವೇ?

ಅಷ್ಟಕ್ಕೂ ಮೋದಿಗೆ ಎನ್‌ಪಿಎಫ್ ದೇಶದ್ರೋಹಿ ಆಗಲ್ಲವೇಕೆ?

ಈಶಾನ್ಯ ರಾಜ್ಯಗಳಾದ ಅಸ್ಸಾಂ, ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯ, ಮಿಜೋರಾಂ, ನಾಗಾಲ್ಯಾಂಡ್, ಸಿಕ್ಕಿಂ, ತ್ರಿಪುರ ಪೈಕಿ ಬಹುತೇಕ ರಾಜ್ಯಗಳಲ್ಲಿ ಬಿಜೆಪಿ ಆಡಳಿತವಿದೆ. ಸಿಕ್ಕಿಂ, ಮಿಜೋರಾಂ ಹೊರತುಪಡಿಸಿ ಉಳಿದೆಡೆ ಬಿಜೆಪಿ ಸ್ಥಳೀಯ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಂಡಿದೆ. ಅಧಿಕಾರಕ್ಕಾಗಿ ತನ್ನ ನಿಲುವುಗಳನ್ನೇ ಬದಲಾಯಿಸಿಕೊಂಡು ಸಾಗುತ್ತಿದೆ. ಅದರಲ್ಲೂ ಮುಖ್ಯವಾಗಿ , ಮೈತ್ರಿ ಬಿಜೆಪಿಗೆ ಅನಿವಾರ್ಯವಾಗಿದೆ. ಮಿತ್ರಪಕ್ಷಗಳನ್ನೇ ದೇಶದ್ರೋಹಿ ಎಂದರೆ ಮೈತ್ರಿ ಕಳೆದುಕೊಳ್ಳುವ ಭೀತಿ ಬಿಜೆಪಿಯದ್ದು. ಅದಕ್ಕಾಗಿ ಗಾಳಿ ಬಂದ ಕಡೆ ಬಿಜೆಪಿ ತೂರಿಕೊಳ್ಳುತ್ತಿದೆ!

ಹಾಗೆಯೇ ಈಶಾನ್ಯ ಭಾರತದ ಬುಡಕಟ್ಟು ಸಂಸ್ಕೃತಿಯು ಭಿನ್ನವಾದುದ್ದು. ಇದರ ಅರಿವು ಬಿಜೆಪಿಯ ಹಿರಿಯ ನಾಯಕರುಗಳಿಗಿದೆ. ಆದ್ದರಿಂದ ಇತರೆ ರಾಜ್ಯಗಳಂತೆ ಈಶಾನ್ಯ ರಾಜ್ಯಗಳಲ್ಲಿ ಹಿಂದುತ್ವ ಅಜೆಂಡಾವನ್ನು ನೇರವಾಗಿ ಹೇರುವ ಅಪಾಯವನ್ನು ಮೈಮೇಲೆ ಎಳೆದುಕೊಳ್ಳುತ್ತಿಲ್ಲ. ಈ ರಾಜ್ಯಗಳಲ್ಲಿ ತನ್ನ ಹಿಂದುತ್ವವನ್ನು ಬಿಜೆಪಿ ಹೇರಲು ಹೋದರೆ ಜನಾಂಗೀಯ ಸಂಘರ್ಷ ಕಟ್ಟಿಟ್ಟ ಬುತ್ತಿ. ಅಷ್ಟು ಮಾತ್ರವಲ್ಲದೆ ನಾಗಾ ಬಂಡುಕೋರರೊಂದಿಗೆ (-) ಕೇಂದ್ರ ಸರ್ಕಾರ ಶಾಂತಿ ಮಾತುಕತೆಗೆ ಇಳಿದಿದೆ. ಹೀಗಿರುವಾಗ ಸಾಂಸ್ಕೃತಿಕ ವಿಷಯಗಳ ಮೇಲೆ ಸಂಘರ್ಷಕ್ಕಿಳಿದರೆ ಬಿಜೆಪಿ ಇರುವ ಅಲ್ಪ ಅಧಿಕಾರವನ್ನೂ ಕಳೆದುಕೊಳ್ಳುವುದು ಪಕ್ಕ. ಅಂದರೆ ತನ್ನ ಅಧಿಕಾರ ಉಳಿಸಿಕೊಳ್ಳಲು ಬಿಜೆಪಿ ಡಬಲ್ ಸ್ಟಾಂಡರ್ಡ್‌ಗೆ ಜೋತುಬಿದ್ದಿದೆ.

ಈ ಸಂದರ್ಭದಲ್ಲಿ ನಾವು ಬಿಜೆಪಿಯನ್ನು ಕೇಳಬೇಕಾದ ಪ್ರಶ್ನೆಗಳು ಹಲವಿದೆ. ದೆಹಲಿಯ ಜೆಎನ್‌ಯು ವಿಶ್ವವಿದ್ಯಾಲಯದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದವರ ವಿರುದ್ಧ ಮತ್ತು ಬೀದರ್‌ನ ಶಾಲಾ ನಾಟಕವೊಂದರಲ್ಲಿ ಸಿಎಎ ವಿರುದ್ಧ ಮಾತನಾಡಿದ್ದಕ್ಕೆ ಮಕ್ಕಳ ಮೇಲೆ ದೇಶದ್ರೋಹ ಪಕ್ರರಣ ದಾಖಲಿಸುವ ಬಿಜೆಪಿ ಮತ್ತು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ತನ್ನದೇ ಮಿತ್ರಪಕ್ಷ ವಂದೇ ಮಾತರಂ ಗೀತೆ ಹೇರಿಕೆ ವಿರೋಧಿಸಿದಾಗ ಮೌನ ತಾಳುವುದೇಕೆ? ಬಿಜೆಪಿಗೆ ದೇಶಪ್ರೇಮ, ದೇಶಭಕ್ತಿಗಿಂತ ಅಧಿಕಾರ ಮಿಗಿಲಾಯಿತೇ? ಬಿಜೆಪಿ ದೇಶಪ್ರೇಮವು ಅಧಿಕಾರದಲ್ಲಿರುವ ಮಿತ್ರಪಕ್ಷಗಳಿಗೆ ಒಂದು ರೀತಿ ಮತ್ತು ವಿರೋಧ ಪಕ್ಷದವರಿಗೆ ಅಥವಾ ವಿದ್ಯಾರ್ಥಿಗಳಿಗೆ ಇನ್ನೊಂದು ರೀತಿಯೇ?

ರಾಜ್ಯ ಬಜೆಟ್: ಸಾಮಾಜಿಕ ಪರಿವರ್ತನೆಯ ಸಾಧನ

ರಾಜ್ಯದ ಸಂಪನ್ಮೂಲಗಳನ್ನು ನಿರ್ಲಕ್ಷಿತ ಸಮುದಾಯಗಳ ಶಿಕ್ಷಣ, ಆರೋಗ್ಯ, ವಸತಿ ಮತ್ತು ಉದ್ಯೋಗದ ಕಡೆಗೆ ನಿರ್ದೇಶಿಸುವ ಮೂಲಕ, ಸಿದ್ದರಾಮಯ್ಯನವರು ನಾಗರಿಕರನ್ನು ನೆರವು ಪಡೆಯುವ ನಿಷ್ಕ್ರಿಯ ಪಾಲುದಾರರ ಬದಲು ಅಭಿವೃದ್ಧಿಯಲ್ಲಿ ಭಾಗವಹಿಸುವ ಸಕ್ರಿಯ ಪಾಲುದಾರರನ್ನಾಗಿ ಮಾಡಲು ಪ್ರಯತ್ನಿಸಿದ್ದಾರೆ.

ಕರ್ನಾಟಕದ ಸಮಕಾಲೀನ ರಾಜಕೀಯ ಇತಿಹಾಸದಲ್ಲಿ, ಕೆಲವು ನಾಯಕರು ಮಾತ್ರ ಬಜೆಟ್ ಎನ್ನುವುದು ಲೆಕ್ಕಪತ್ರ ನಿರ್ವಹಣೆಗಿಂತ ಹೆಚ್ಚಿನದೆಂದು ಪರಿಗಣಿದ್ದಾರೆ. ಹಲವು ಅವಧಿಗಳ ವಿಸ್ತಾರದಲ್ಲಿ ಹದಿನೇಳು ಬಜೆಟ್‌ಗಳನ್ನು ಮಂಡಿಸಿರುವ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಜೆಟ್ ಎನ್ನುವುದು ''ಅಂಕಿ-ಸಂಖ್ಯೆಗಳನ್ನು ಕೂಡುವ ಮತ್ತು ಕಳೆಯುವ ನಿರ್ಜೀವ ಕೆಲಸವಲ್ಲ, ಬದಲಿಗೆ ಸಾಂವಿಧಾನಿಕ ಭರವಸೆಗಳನ್ನು ಜೀವಂತ ವಾಸ್ತವಗಳಾಗಿ ಪರಿವರ್ತಿಸಲು ಉದ್ದೇಶಿಸುವ ನೈತಿಕ ದಾಖಲೆಯಾಗಿದೆ'' ಎಂದು ನಿರಂತರವಾಗಿ ಹೇಳುತ್ತಾ ಬಂದಿದ್ದಾರೆ. ಅವರ ಹಣಕಾಸು ಕಣ್ಣೋಟವು, ಅಂಬೇಡ್ಕರ್ ಚಿಂತನೆಯಿಂದ ಹಿಡಿದು ಸಮಾಜವಾದಿ ಮಾನವತಾವಾದದವರೆಗಿನ ಸೈದ್ಧಾಂತಿಕ ಪ್ರಭಾವಗಳಿಂದ ರೂಪುಗೊಂಡಿದೆ. ಸಾಮಾಜಿಕ ನ್ಯಾಯ, ಹಣಕಾಸು ವಾಸ್ತವಿಕತೆ ಮತ್ತು ಅಂತರ್ಗತ ಅಭಿವೃದ್ಧಿಯ ವಿಶಿಷ್ಟ ಮಿಶ್ರಣವನ್ನು ಪ್ರತಿಬಿಂಬಿಸುತ್ತದೆ.

ನಾಲ್ಕು ದಶಕಗಳಿಗೂ ಹೆಚ್ಚು ಕಾಲದಿಂದ ಸಾರ್ವಜನಿಕ ಜೀವನದಲ್ಲಿರುವ ಸಿದ್ದರಾಮಯ್ಯನವರು ಕಲ್ಯಾಣ ಯೋಜನೆಗಳು ಮತ್ತು ಬೆಳವಣಿಗೆಯ ನಡುವೆ ಇದೆ ಎಂದು ಭಾವಿಸಲಾದ ಅಂತರವನ್ನು ಕಡಿಮೆ ಮಾಡಲು ಪ್ರಯತ್ನಿಸಿದ್ದಾರೆ. ಅವರ ಬಜೆಟ್‌ಗಳು ಸಂಪನ್ಮೂಲ ಪುನರ್‌ವಿತರಣೆಯನ್ನು ಅಭಿವೃದ್ಧಿಯ ಮೇಲಿನ ಹೊರೆಯಾಗಿ ನೋಡುವ ಬದಲು, ಸಾಮಾಜಿಕ ಹೂಡಿಕೆಯು ಸುಸ್ಥಿರ ಹಣಕಾಸು ವಿಸ್ತರಣೆಯ ಅಡಿಪಾಯ ಎಂದು ಪ್ರತಿಪಾದಿಸುತ್ತವೆ. ರಾಜ್ಯದ ಸಂಪನ್ಮೂಲಗಳನ್ನು ನಿರ್ಲಕ್ಷಿತ ಸಮುದಾಯಗಳ ಶಿಕ್ಷಣ, ಆರೋಗ್ಯ, ವಸತಿ ಮತ್ತು ಉದ್ಯೋಗದ ಕಡೆಗೆ ನಿರ್ದೇಶಿಸುವ ಮೂಲಕ, ಅವರು ನಾಗರಿಕರನ್ನು ನೆರವು ಪಡೆಯುವ ನಿಷ್ಕ್ರಿಯ ಪಾಲುದಾರರ ಬದಲು ಅಭಿವೃದ್ಧಿಯಲ್ಲಿ ಭಾಗವಹಿಸುವ ಸಕ್ರಿಯ ಪಾಲುದಾರರನ್ನಾಗಿ ಮಾಡಲು ಪ್ರಯತ್ನಿಸಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ರಾಜಕೀಯ ಹಕ್ಕುಗಳ ಜೊತೆಗೆ ಸಾಮಾಜಿಕ ಮತ್ತು ಹಣಕಾಸು ಸಮಾನತೆ ಇರಬೇಕು ಎಂದು ಒತ್ತಿಹೇಳಿದ ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಯ ಅಡಿಪಾಯದ ಮೇಲೆ ಸಿದ್ದರಾಮಯ್ಯನವರ ವಿಚಾರಧಾರೆಯು ಬಲವಾಗಿ ನೆಲೆಗೊಂಡಿದೆ. ಐತಿಹಾಸಿಕವಾಗಿ ಹಿಂದುಳಿದ ಸಮುದಾಯಗಳು ಎದುರಿಸುವ ರಾಚನಿಕ ಅಸಮಾನತೆಗಳನ್ನು ಕಡಿಮೆ ಮಾಡಲು ರಾಜ್ಯವು ಆ ಸಮುದಾಯಗಳಿಗೆ ನಿರ್ದಿಷ್ಟವಾದ ಯೋಜನೆಗಳನ್ನು ರೂಪಿಸಬೇಕು ಎನ್ನುವುದನ್ನು ಸಿದ್ದರಾಮಯ್ಯನವರ ಹಣಕಾಸು ನೀತಿಯು ಮತ್ತೆ ಮತ್ತೆ ಹೇಳುತ್ತಲೇ ಬಂದಿವೆ. ಅವಕಾಶಗಳಿಂದ ಹೊರಹಾಕಲ್ಪಟ್ಟವರಿಗಾಗಿಯೇ ನಿರ್ದಿಷ್ಟವಾಗಿ ವಿದ್ಯಾರ್ಥಿವೇತನ, ಹಾಸ್ಟೆಲ್ ಸೌಲಭ್ಯ ಮತ್ತು ಉದ್ಯೋಗಾವಕಾಶದಂತಹ ಉಪಕ್ರಮಗಳನ್ನು ವಿಸ್ತರಿಸುವ ಅವರ ಬಜೆಟ್‌ಗಳು, ಸಾರ್ವಜನಿಕ ಕಾರ್ಯನೀತಿಯ ಮೂಲಕ ಸಮಾನತೆಯನ್ನು ಸಕ್ರಿಯಗೊಳಿಸಬೇಕು ಎಂಬ ನಂಬಿಕೆಯನ್ನು ವ್ಯಕ್ತಪಡಿಸುತ್ತವೆ.

ಪ್ರಜಾಸತ್ತಾತ್ಮಕ ಕ್ರಮಗಳ ಮೂಲಕ ಶ್ರೇಣೀಕರಣವನ್ನು ಕೆಡವಬೇಕು ಎಂಬ ರಾಮ ಮನೋಹರ ಲೋಹಿಯಾ ಅವರ ಸಮಾಜವಾದಿ ಚಿಂತನೆಯೂ ಅಷ್ಟೇ ಪ್ರಭಾವಶಾಲಿಯಾಗಿದೆ. ಈ ಚಿಂತನೆಯನ್ನು ಪ್ರತಿಬಿಂಬಿಸುವ ಸಿದ್ದರಾಮಯ್ಯ ಅವರ ಆಡಳಿತ ಮಾದರಿಯು, ಹಣಕಾಸು ಶಿಸ್ತನ್ನು ಪುನರ್ವಿತರಣಾ ಕಾರ್ಯಕ್ರಮಗಳೊಂದಿಗೆ ಸಂಯೋಜಿಸುತ್ತದೆ ಹಾಗೂ ರಾಜ್ಯವು ಹಣಕಾಸು ಬೆಳವಣಿಗೆ ಮತ್ತು ಸಾಮಾಜಿಕ ನ್ಯಾಯದ ನಡುವೆ ಒಂದನ್ನು ಆಯ್ಕೆ ಮಾಡಿಕೊಳ್ಳುವ ಅಗತ್ಯವಿಲ್ಲ. ಬದಲಿಗೆ ಅನುಕ್ರಮಿಕ ತೆರಿಗೆ ಪದ್ಧತಿ, ಮೂಲಸೌಕರ್ಯ ಹೂಡಿಕೆ ಮತ್ತು ಕಲ್ಯಾಣ ಯೋಜನೆಗಳ ವಿಸ್ತರಣೆಗಳು ಯೋಜಿತ ಚೌಕಟ್ಟಿನೊಳಗೆ ಒಟ್ಟಿಗೆ ಕಾರ್ಯನಿರ್ವಹಿಸುವಂತಹ ಮಾಪನಾಂಕ ನಿರ್ಣಯ ಮಾದರಿಯನ್ನು ರಾಜ್ಯದ ಮುಂದಿಟ್ಟಿದ್ದಾರೆ.

ಹಿಂದುಳಿದ ವರ್ಗಗಳು ಮತ್ತು ಅಂಚಿಗೆ ದೂಡಲ್ಪಟ್ಟ ಸಮುದಾಯಗಳ ಸಬಲೀಕರಣಕ್ಕೆ ಒತ್ತು ನೀಡುವ ಸಿದ್ದರಾಮಯ್ಯನವರ ಕ್ರಮವು ದೇವರಾಜ ಅರಸು ಅವರ ಪರಂಪರೆಯನ್ನು ಮುಂದುವರೆಸುತ್ತದೆ. ಆದರೆ, ಜಾತಿಯ ಮೇಲೆ ಹೆಚ್ಚು ಅವಲಂಬಿತವಾಗಿದ್ದ ಹಿಂದಿನ ಪುನರ್ ವಿತರಣಾ ರಾಜಕೀಯಕ್ಕಿಂತ ಭಿನ್ನವಾಗಿ, ಸಿದ್ದರಾಮಯ್ಯ ಅವರು ಸಾಮಾಜಿಕ ವಿಭಜನೆಗಳನ್ನು ಮತ್ತಷ್ಟು ಆಳಗೊಳಿಸದೆಯೇ ಕೊರತೆಗಳನ್ನು ಪರಿಹರಿಸುವ, ಸೂಕ್ಷ್ಮವಾದ ಸಮಗ್ರ ಅಭಿವೃದ್ಧಿ ಮಾದರಿಯನ್ನು ಅನುಸರಿಸುತ್ತಾ ಬಂದಿದ್ದಾರೆ. ಅವರ ಬಜೆಟ್‌ಗಳು ಪ್ರಾದೇಶಿಕ ಮತ್ತು ಸಾಮಾಜಿಕ ಹಿತಾಸಕ್ತಿಗಳ ನಡುವಿನ ಸಮತೋಲನವನ್ನು ಕಾಯ್ದುಕೊಂಡೇ ವಿಶಾಲ ತಳಹದಿಯ ಅಭಿವೃದ್ಧಿ ಕಾರ್ಯಸೂಚಿಯನ್ನು ಮುಂದಿಡುತ್ತವೆ.

ಬಸವಣ್ಣನವರ ಕಾಯಕ (ಶ್ರಮದ ಘನತೆ) ಮತ್ತು ದಾಸೋಹದ (ಎಲ್ಲರ ಒಳಿತಿಗಾಗಿ ಸಂಪತ್ತಿನ ಹಂಚಿಕೆ) ಆದರ್ಶಗಳಿಂದ ಸ್ಫೂರ್ತಿ ಪಡೆದಿರುವ ಸಿದ್ದರಾಮಯ್ಯನವರು, ಆಧುನಿಕ ರಾಜಕೀಯ ಸಿದ್ಧಾಂತಗಳ ಆಚೆಗೆ, ಕರ್ನಾಟಕದ ದೇಸೀಯ ಸಂಪ್ರದಾಯಗಳನ್ನು ಹೆಚ್ಚಾಗಿ ಉಲ್ಲೇಖಿಸುತ್ತಾರೆ. ಈ ತತ್ವಗಳು ಜೀವನೋಪಾಯ ಮಾರ್ಗಗಳ ಸೃಷ್ಟಿ, ಸಾಮಾಜಿಕ ಭದ್ರತೆ ಮತ್ತು ಸಂಪನ್ಮೂಲಗಳ ಸಮಾನ ಹಂಚಿಕೆ ಬಗೆಗಿನ ಅವರ ಒಲವನ್ನು ರೂಪಿಸಿವೆ. ಅಭಿವೃದ್ಧಿ ಮತ್ತು ಹಣಕಾಸು ಬೆಳವಣಿಗೆಗಳು ಅರ್ಥಪೂರ್ಣವಾಗಬೇಕಾದರೆ ಆಡಳಿತವು ದುರ್ಬಲ ವರ್ಗಗಳಿಗೆ ಆದ್ಯತೆ ನೀಡಬೇಕು ಎನ್ನುವ ಅವರ ನಿಲುವಿನ ಹಿಂದೆ, ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನೂ ಮೇಲಕ್ಕೆತ್ತಬೇಕು ಎನ್ನುವ ಗಾಂಧಿವಾದಿ ಕಲ್ಪನೆಯು ಕೆಲಸಮಾಡುತ್ತದೆ.

ಸಿದ್ದರಾಮಯ್ಯ ಅವರ ಬಜೆಟ್‌ಗಳ ವೈಶಿಷ್ಟ್ಯ ಇರುವುದು ಸಾಂವಿಧಾನಿಕ ನೈತಿಕತೆಯನ್ನು ಹಣಕಾಸು ಯೋಜನೆಯೊಂದಿಗೆ ಸಂಯೋಜಿಸುವ ಪ್ರಯತ್ನದಲ್ಲಿ. ಕಲ್ಯಾಣ ಯೋಜನೆಗಳನ್ನು ಅಲ್ಪಾವಧಿಯ ಜನಪ್ರಿಯ ಚಟುವಟಿಕೆಗಳಾಗಿಸದೆ, ಜನರ ಖರೀದಿ ಶಕ್ತಿಯನ್ನು, ಮಾನವ ಸಾಮರ್ಥ್ಯವನ್ನು ಮತ್ತು ಆರ್ಥಿಕ ಭಾಗವಹಿಸುವಿಕೆಯನ್ನು ಹೆಚ್ಚಿಸುವ ದೀರ್ಘಾವಧಿಯ ಹೂಡಿಕೆಗಳಾಗಿ ರೂಪಿಸುತ್ತಾರೆ. ಸಾಮಾಜಿಕ ಸುರಕ್ಷತೆ ಒದಗಿಸುವುದರಲ್ಲಿ ರಾಜ್ಯದ ಪಾತ್ರವನ್ನು ಕಡಿಮೆ ಮಾಡುವ ನವಉದಾರವಾದಿ ನೀತಿಗೆ ಈ ವಿಧಾನವು ಸವಾಲು ಒಡ್ಡುತ್ತದೆ. ಸಾರ್ವಜನಿಕ ವೆಚ್ಚದ ಮೂಲಕ ಐತಿಹಾಸಿಕ ಅಸಮತೋಲನವನ್ನು ಸರಿಪಡಿಸುವ ಅಭಿವೃದ್ಧಿ ಮಾದರಿಯಾಗಿ ಇದು ರೂಪುಗೊಂಡಿದೆ.

ಅವರ ಅಧಿಕಾರದ ಅವಧಿಯಲ್ಲಿ ಒಕ್ಕೂಟ ವ್ಯವಸ್ಥೆ ಮತ್ತು ರಾಜ್ಯದ ಸ್ವಾಯತ್ತತೆಗೆ ಬಲವಾದ ಬದ್ಧತೆಯನ್ನು ತೋರಲಾಗಿದೆ. ನ್ಯಾಯಯುತವಾದ ಆರ್ಥಿಕ ವಿಕೇಂದ್ರೀಕರಣ ಮತ್ತು ಒಕ್ಕೂಟ ರಚನೆಯೊಳಗೇ ಕರ್ನಾಟಕದ ಆರ್ಥಿಕ ಹಕ್ಕುಗಳನ್ನು ಸಮರ್ಥಿಸುವ ಮೂಲಕ ಸಿದ್ದರಾಮಯ್ಯ ಅವರು ಸ್ಥಳೀಯ ವಾಸ್ತವಗಳಿಗೆ ಸೂಕ್ತವಾದಂತಹ ಕಲ್ಯಾಣ ಯೋಜನೆಗಳನ್ನು ಮತ್ತು ಅಭಿವೃದ್ಧಿ ನೀತಿಗಳನ್ನು ರೂಪಿಸಲು ರಾಜ್ಯಗಳನ್ನು ಸಬಲಗೊಳಿಸುವುದರ ಮಹತ್ವವನ್ನು ಒತ್ತಿ ಹೇಳಿದ್ದಾರೆ.

ಕಲ್ಯಾಣ ಯೋಜನೆಗಳ ಮೂಲಕ ಸಾಧಿಸುವ ಅಭಿವೃದ್ಧಿಯು ಹಣಕಾಸು ಕಾರ್ಯಕ್ಷಮತೆಯನ್ನು ದುರ್ಬಲಗೊಳಿಸುವುದಿಲ್ಲ ಎನ್ನುವುದನ್ನು ಅವರ ಆಡಳಿತದ ಅವಧಿಯು ತೋರಿಸಿದೆ. ಸಮತೆ ಮತ್ತು ದಕ್ಷತೆಗಳು ವಿರೋಧಾತ್ಮಕ ಗುರಿಗಳಲ್ಲ, ಬದಲಿಗೆ ಒಂದಕ್ಕೊಂದು ಪೂರಕವಾಗಿವೆ ಎನ್ನುವುದು ಸಿದ್ದರಾಮಯ್ಯ ಅವರ ಬಲವಾದ ಪ್ರತಿಪಾದನೆ. ಅವರ ಆಡಳಿತದ ಅವಧಿಯಲ್ಲಿ ಕರ್ನಾಟಕ ಸಾಧಿಸಿರುವ ಬೆಳವಣಿಗೆಯು ಸಾಮಾಜಿಕ ವಲಯದ ಮೇಲೆ ಮಾಡಿರುವ ವಿಸ್ತೃತ ವೆಚ್ಚ ಹಾಗೂ ಬಲವಾದ ಆರ್ಥಿಕ ಸ್ಥಿತಿಯ ಸೂಚಕಗಳು ಜೊತೆಜೊತೆಯಲ್ಲಿ ಸಾಗಬಲ್ಲವು ಎನ್ನುವುದಕ್ಕೆ ಪುರಾವೆ ಒದಗಿಸುತ್ತವೆ.

ಒಟ್ಟಾರೆಯಾಗಿ, ಸಿದ್ದರಾಮಯ್ಯ ಅವರ ಹದಿನೇಳು ಬಜೆಟ್‌ಗಳು ಆಯಾ ಕಾಲದ ಹಣಕಾಸು ದಾಖಲೆಗಳಿಗಿಂತ ಹೆಚ್ಚಿನದನ್ನು ಹೇಳುತ್ತವೆ. ಯಾವುದೇ ಆಡಳಿತವು ಐತಿಹಾಸಿಕ ಅಸಮಾನತೆಗಳನ್ನು ಸಕ್ರಿಯವಾಗಿ ನಿವಾರಿಸಬೇಕು ಎಂಬ ನಂಬಿಕೆಯಲ್ಲಿ ಬೇರೂರಿರುವ ರಾಜಕೀಯ ಹಣಕಾಸು ನೀತಿಯನ್ನು ಅವು ನಿರೂಪಿಸುತ್ತವೆ. ಹೂಡಿಕೆ ಮತ್ತು ಬೆಳವಣಿಗೆಯನ್ನು ಸ್ಥಿರವಾಗಿ ಉಳಿಸಿಕೊಂಡೇ ಸಂಪನ್ಮೂಲಗಳ ಮರುವಿತರಣೆ ವಿಧಾನಗಳನ್ನು ಹಣಕಾಸು ನೀತಿಯೊಳಗೆ ಅಳವಡಿಸುವ ಮೂಲಕ ಅಭಿವೃದ್ಧಿಯನ್ನು ಸಂಪತ್ತು ಸೃಷ್ಟಿಯಿಂದ ಮಾತ್ರವಲ್ಲದೆ, ಆ ಸಂಪತ್ತನ್ನು ಎಷ್ಟು ವ್ಯಾಪಕವಾಗಿ ಹಂಚಿಕೊಳ್ಳಲಾಗಿದೆ ಎಂಬುದರ ಮೂಲಕ ಅಳೆಯುವ ಮಾದರಿಯನ್ನು ಅವರು ಮುಂದಿಟ್ಟಿದ್ದಾರೆ.

ದೇಶದ ಅಭಿವೃದ್ಧಿಗೆ ಮಹಿಳೆಯ ಸಬಲೀರಣವೇ ನಿಜವಾದ ಶಕ್ತಿ ಕಾನೂನು ಅರಿವು ನೆರವು ಕಾರ್ಯಕ್ರಮ

ಸಿರುಗುಪ್ಪ,ಮಾ.10-

ಮಹಿಳೆಯರ ಸಬಲೀಕರಣವೇ ನವ ಭಾರತ ನಿರ್ಮಾಣಕ್ಕೆ ಅಡಿಪಾಯ ಎಂದು ಸಿವಿಲ್ ನ್ಯಾಯಾಧೀಶ ಆರ್.ಎಚ್.ಅಶೋಕ್ ಅವರು ಹೇಳಿದರು

ತಾಲೂಕ ಪಂಚಾಯತ್ ಸಭಾಭವನದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ವಕೀಲರ ಸಂಘ ತಾಲೂಕು ಆಡಳಿತ ತಾಲೂಕು ಪಂಚಾಯತ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪೊಲೀಸ್ ಇಲಾಖೆ ಎಲ್ಲಾ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಾ ಮಹಿಳೆಯರಿಗೆ ಶಿಕ್ಷಣ ನೀಡುವ ಮೂಲಕ ಅವರಲ್ಲಿ ಸ್ವಾವಲಂಬನೆ ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳುವ ಶಕ್ತಿಯನ್ನು ತುಂಬಬೇಕು ದೇಶದ ಸರ್ವತೋಮುಖ ಅಭಿವೃದ್ಧಿಗೆ ಸಾಧ್ಯ ಎಂದು ಅವರು ಕರೆ ನೀಡಿದರು

ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಅಧ್ಯಕ್ಷರು ತಾಲೂಕ ಕಾರ್ಯನಿರ್ವಾಹ ದಂಡಾಧಿಕಾರಿ ತಹಶೀಲ್ದಾರ್ ಗೌಸಿಯ ಬೇಗಂ ಅವರು ಮಾತನಾಡಿ ಶಕ್ತಿ ಸಹನೆ ಮತ್ತು ಸಾಧನೆಯ ಪ್ರತೀಕ ಮಹಿಳೆಯರಿಗೆ ಸಮರ್ಪಿತ ದಿನ ಎಂದರು

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಪವನ್ ಕುಮಾರ್ ಎಸ್. ದಂಡಪ್ಪನವರ್ ಅವರು ಮಾತನಾಡಿ ಮಹಿಳಾ ಸಮಾನತೆ ಗೌರವ ಮತ್ತು ಅವಕಾಶಗಳೊಂದಿಗೆ ಮಹಿಳೆಯರು ಮುಂದುವರಿದಾಗ ಸಮಾಜವು ಶಕ್ತಿಶಾಲಿ ಯಾಗುತ್ತದೆ ಎಂದರು

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR